ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

NEWS ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume:05 ಸಂಪುಟ: 05 | Issue:206 ಸಂಚಿಕೆ: 206 | Date:08-09-2026 Tuesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

ನೈಸ್ ಯೋಜನೆ ವಿಚಾರದಲ್ಲಿ ಕಾನೂನು ಚೌಕಟ್ಟಿನಲ್ಲೇ ಕೆಲಸ ಮಾಡುತ್ತಿದ್ದೇವೆ

ದೇವೇಗೌಡರು ಕೋರ್ಟ್‌ಗೆ ಹೋಗಲಿ, ಉಪವಾಸ ಆದ್ರೂ ಮಾಡಲಿ– ಸಿಎಂ, ಡಿಕೆಶಿ

ಸೂರ್ಯಪ್ರಗತಿನ್ಯೂಸ್.ಕಾಂ






ಬೆಂಗಳೂರು, ನೈಸ್ ರಸ್ತೆಯಲ್ಲಿ ಟೋಲ್ ಸಂಗ್ರಹದ ವಿಚಾರಕ್ಕೆ ಸಂಬಂಧಿಸಿದಂತೆ, ದಳಪತಿಗಳು ಮತ್ತು ಸರ್ಕಾರದ ನಡುವೆ ವಾಕ್ಸಮರ ನಡೆಯುತ್ತಿದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ್ರು, ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಪತ್ರವನ್ನು ಬರೆದಿದ್ದಾರೆ. ಇನ್ನು ಇದೀಗ ದೇವೇಗೌಡರ ಪತ್ರಕ್ಕೆ ಪ್ರತಿಕ್ರಿಯಿಸಿರುವ ಡಿಕೆ ಶಿವಕುಮಾರ್, ನೈಸ್ ಯೋಜನೆ ವಿಚಾರದಲ್ಲಿ ಕಾನೂನು ಚೌಕಟ್ಟಿನಲ್ಲೇ ಕೆಲಸ ಮಾಡುತ್ತಿದ್ದೇವೆ. ಈ ವಿಚಾರದಲ್ಲಿ ಕಾನೂನು ಅಭಿಪ್ರಾಯವನ್ನೂ ಪಡೆದು ಕೊಂಡಿದ್ದೇವೆ. ಬೇಕಾದ್ರೆ ದೇವೇಗೌಡರು ಕೋರ್ಟ್‌ಗೆ ಹೋಗಲಿ, ಉಪವಾಸ ಆದ್ರೂ ಮಾಡಲಿ ಎಂದು ತಿರುಗೇಟು ನೀಡಿದ್ದಾರೆ.

ನೈಸ್ ಪ್ರಾಜೆಕ್ಟ್ ವಿಚಾರದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ಬರೆದಿರುವ ಪತ್ರ ಸಂಬಂಧ ದೇವನಹಳ್ಳಿ ಮಾತನಾಡಿದ ಡಿಕೆ ಶಿವಕುಮಾರ್, ನಾವು ಏನೆ ಮಾಡಿದರು ಕಾನೂನು ಚೌಕಟ್ಟಿನಲ್ಲಿ ಕಾನೂನು ಅಭಿಪ್ರಾಯ ತೆಗೆದುಕೊಂಡಿದ್ದೇವೆ. ಕಾನೂನು ಬಿಟ್ಟು ಏನು ಮಾಡಲ್ಲ ಯಾರು ತಲೆಕೆಡಸಿಕೊಳ್ಳುವ ಅವಶ್ಯಕತೆಯಿಲ್ಲ. ಬೇಕಾದ್ರೆ ಕೋರ್ಟ್ ಇದೆ ಕಾನೂನು ಇದೆ ಉಪವಾಸ ಬೇಕಾದರೆ ಮಾಡಲಿ. ನನಗೂ ಪ್ರಜ್ಞೆ ಇದೆ ಬೇಸಿಕ್ ಕಾಮನಸೆನ್ಸ್ ಇದೆ ಎಂದಿದ್ದಾರೆ.

ಕಾನೂನು ಬಿಟ್ಟು ಯಾವುದೇ ಕೆಲಸ ಮಾಡುವುದಿಲ್ಲ. ಹೀಗಾಗಿ ಯಾರೂ ತಲೆಕೆಡಿಸಿಕೊಳ್ಳುವ ಅವಶ್ಯಕತೆ ಇಲ್ಲ. ಬೇಕಾದ್ರೆ ಕಾನೂನು ಇದೆ, ಕೋರ್ಟ್ ಇದೆ. ಉಪವಾಸ ಮಾಡಬೇಕಾದ್ರೆ ಮಾಡಲಿ. ನನಗೂ ಪ್ರಜ್ಞೆ ಇದೆ, ಬೇಸಿಕ್ ಕಾಮನ್ ಸೆನ್ಸ್ ಇದೆ. ನಿಮ್ಮ ವೈಯಕ್ತಿಕ ಅಭಿಪ್ರಾಯಗಳು ಹಾಗೂ ಚರ್ಚೆಗಳನ್ನ ನಾನು ಮೊದಲಿನಿಂದಲೂ ನೋಡಿದ್ದೇನೆ. ಯಾವ ಅಗ್ರಿಮೆಂಟ್‌ಗೆ ಸಹಿ ಹಾಕಲಾಗಿದೆಯೋ, ಅದೇ ಹಾದಿಯಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಯಾರು ಆಸ್ತಿ ಕಳೆದುಕೊಂಡಿದ್ದಾರೋ ಅವರನ್ನು ರಕ್ಷಣೆ ಮಾಡಬೇಕು ಅಲ್ಲವೇ? ಈ ವಿಚಾರಕ್ಕೆ ಸಂಬಂಧಿಸಿದಂತೆ ಈ ಹಿಂದೆ ಸರ್ಕಾರಗಳು ಮಾಡಿಕೊಂಡಿರುವ ಅಗ್ರಿಮೆಂಟ್‌ಗಳನ್ನೆಲ್ಲ ತಾನು ಪರಿಶೀಲಿಸಿದ್ದೇನೆ. ಎಲ್ಲವನ್ನೂ ಕಾನೂನು ಚೌಕಟ್ಟಿನಲ್ಲೇ ಮುಂದುವರಿಸಲಾಗುವುದು ಎಂದು ಸಿಎಂ ಸ್ಪಷ್ಟಪಡಿಸಿದರು. ಈ ಮೂಲಕ ದೇವೇಗೌಡರ ಪತ್ರಕ್ಕೆ ತಿರುಗೇಟು ನೀಡಿದ್ದಾರೆ.



ತುಮಕೂರಿನ ಕಲೆ,ಸಂಸ್ಕೃತಿಹಾಗೂ ಪ್ರತಿಭೆ ರಾಜ್ಯದ ಗಮನ ಸೆಳೆಯಬೇಕು

ಅ.11 ರಿಂದ 21 ರವರೆಗೆ ತುಮಕೂರು ದಸರಾ ಉತ್ಸವ– ಡಿಸಿಎಂ, ಡಾ. ಜಿ. ಪರಮೇಶ್ವರ್



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಾಡಹಬ್ಬ ತುಮಕೂರು ದಸರಾ ಉತ್ಸವವನ್ನು ಈ ಬಾರಿಯೂ ವಿಜೃಂಭಣೆಯಿಂದ ಆಚರಿಸುವ ಮೂಲಕ ತುಮಕೂರಿನ ಕಲೆ, ಸಂಸ್ಕೃತಿ ಹಾಗೂ ಪ್ರತಿಭೆಯನ್ನು ರಾಜ್ಯದ ಗಮನ ಸೆಳೆಯುವಂತೆ ಮಾಡಬೇಕು ಎಂದು ಉಪ ಮುಖ್ಯಮಂತ್ರಿ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ 2026ರ ದಸರಾ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಪ್ರತಿ ವರ್ಷದಂತೆ ಈ ವರ್ಷವೂ ದಸರಾ ಉತ್ಸವವನ್ನು ವಿಶೇಷ ಹಾಗೂ ಅರ್ಥಪೂರ್ಣವಾಗಿ ಆಚರಿಸಬೇಕು. ಉತ್ಸವದಲ್ಲಿ ಹೊಸತನವನ್ನು ಪರಿಚಯಿಸುವ ಮೂಲಕ ತುಮಕೂರನ್ನು ಎಲ್ಲರೂ ಗುರುತಿಸುವಂತಹ ರೀತಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಹೇಳಿದರು.

ದಸರಾ ಉತ್ಸವವು ಕೇವಲ ಮನರಂಜನಾ ಕಾರ್ಯಕ್ರಮವಾಗದೆ ಮಕ್ಕಳಿಗೆ, ಯುವಕರಿಗೆ ಹಾಗೂ ಸ್ಥಳೀಯ ಕಲಾವಿದರಿಗೆ ಉತ್ತಮ ವೇದಿಕೆಯಾಗಬೇಕು. ಯುವ ಕಲಾವಿದರು, ನೃತ್ಯ ತಂಡಗಳು ಸೇರಿದಂತೆ ಸ್ಥಳೀಯ ಪ್ರತಿಭೆಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸುವ ಮೂಲಕ ಅವರ ಪ್ರತಿಭೆ ಅನಾವರಣಕ್ಕೆ ಅವಕಾಶ

ಅದ್ದೂರಿಯಾಗಿ ನಡೆಯಲಿದೆ ತುಮಕೂರು ದಸರಾ ಉತ್ಸವ

ಸೆ.15ರಂದು ಲಾಂಛನ ಬಿಡುಗಡೆ

ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ ;

ಕ್ರೀಡಾ ಚಟುವಟಿಕೆಗಳಿಗೂ ಅವಕಾಶ

ಕಣ್ಮನ ಸೆಳೆಯಲಿದೆ ದೀಪಾಲಂಕಾರ

; ರಾತ್ರಿ ವೇಳೆ ದೀಪಾಲಂಕಾರ ವೀಕ್ಷಿಸಲು ಉಚಿತ ಬಸ್ ವ್ಯವಸ್ಥೆ

ಅಮಾನಿಕೆರೆಯಲ್ಲಿ ಅತಿದೊಡ್ಡ "ಲೈಟ್ ಅಂಡ್ ಸೌಂಡ್" ಕಾರಂಜಿ

ಎತ್ತಿನಹೊಳೆ: ಅಕ್ಟೋಬರ್ ವೇಳೆಗೆ ತುಮಕೂರಿಗೆ ಪ್ರಾಯೋಗಿಕವಾಗಿ ನೀರು : ಡಿಸಿಎಂ, ಡಾ.ಜಿ.ಪರಮೇಶ್ವರ



ಮಾಡಿಕೊಡಬೇಕು ಎಂದು ತಿಳಿಸಿದರು. ಅಮಾನಿಕೆರೆ ಪ್ರಮುಖ ಆಕರ್ಷಣೆಯಾಗಲಿ ತುಮಕೂರು ನಗರದ ಅಮಾನಿಕೆರೆಯನ್ನು ದಸರಾ ಸಂದರ್ಭದಲ್ಲಿ ಆಕರ್ಷಕವಾಗಿ ಅಲಂಕರಿಸಿ, ವಿದ್ಯುತ್ ದೀಪಾಲಂಕಾರ ಸೇರಿದಂತೆ ವಿವಿಧ ಅಲಂಕಾರಗಳಿಂದ ಕಲರ್‌ಫುಲ್ ಆಗಿ ರೂಪಿಸಬೇಕು. ಅಮಾನಿಕೆರೆಯನ್ನು ದಸರಾ ಉತ್ಸವದ ಪ್ರಮುಖ ಆಕರ್ಷಣೆಯನ್ನಾಗಿ ಮಾಡುವ ಮೂಲಕ ಸಾರ್ವಜನಿಕರನ್ನು ಸೆಳೆಯುವಂತಹ ವಾತಾವರಣ ನಿರ್ಮಿಸಬೇಕು ಎಂದು ಅವರು ಸೂಚಿಸಿದರು.ನಗರದ ಪ್ರಮುಖ ಸರ್ಕಾರಿ ಕಚೇರಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ವಿದ್ಯುತ್ ದೀಪಾಲಂಕಾರ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ ಅವರು, ಉತ್ಸವದ ಸಂದರ್ಭದಲ್ಲಿ ಇಡೀ ನಗರ ಹಬ್ಬದ ವಾತಾವರಣದಿಂದ ಕಂಗೊಳಿಸುವಂತೆ ಕ್ರಮ ಕೈಗೊಳ್ಳಬೇಕು ಎಂದರು.

ತುಮಕೂರು ದಸರಾ ಉತ್ಸವವು "ಊರ ಹಬ್ಬ"ದ ರೀತಿಯಲ್ಲಿ ಎಲ್ಲರನ್ನೂ ಒಳಗೊಂಡು ಉತ್ತಮವಾಗಿ ನಡೆಯಬೇಕು. ಉತ್ಸವದ ಮೂಲಕ ತುಮಕೂರಿನ ಕಲೆ, ಸಂಸ್ಕೃತಿ ಹಾಗೂ ಸ್ಥಳೀಯ ಪ್ರತಿಭೆಗಳಿಗೆ ಉತ್ತೇಜನ ದೊರೆಯುವುದರ ಜೊತೆಗೆ ತುಮಕೂರಿನ ಹೆಸರು ಮತ್ತಷ್ಟು ಪ್ರಸಿದ್ಧಿಯಾಗುವಂತಾಗಬೇಕು ಎಂದು ಹೇಳಿದರು.

ತುಮಕೂರು ದಸರಾ ಉತ್ಸವವನ್ನು ಅಕ್ಟೋಬರ್ 11 ರಿಂದ 21ರವರೆಗೆ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಸೇರಿದಂತೆ ನೋಡಾ ಜಮ್ ಜಮ್, ಮುರಳೀಧರ ಹಾಲಪ್ಪ, ಲಕ್ಷ್ಮಣ್ ದಾಸ್ ಹಾಗೂ ವಿವಿಧ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಹಾರ್ಟ್ ಸೇಫ್ ತುಮಕೂರು–ಸಿಪಿಆರ್ ಜಾಗೃತಿ ತರಬೇತಿ ಕಾರ್ಯಕ್ರಮಕ್ಕೆ ಡಾ.ಜಿ.ಪರಮೇಶ್ವರ ಚಾಲನೆ

ಅ.2–ವಿಶ್ವ ಹೃದಯದಿನದವರೆಗೆ ಜಿಲ್ಲೆಯ 320 ಗ್ರಾ.ಪಂ,ಗಳಲ್ಲಿ ಯುವ ಜನರು, ಆಶಾ ಕಾರ್ಯಕರ್ತೆಯರಿಗೆ ತಲುಪಲಿರುವ ಜಾಥ

ಸೂರ್ಯಪ್ರಗತಿನ್ಯೂಸ್.ಕಾಂ





ತುಮಕೂರು: ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಯ ಹಾರ್ಟ್ ಸೆಂಟರ್ ಹಾಗೂ ಕಾರ್ಡಿಯೋಥೊರಾಸಿಕ್ ಮತ್ತು ತುಮಕೂರು ಜಿಲ್ಲಾಡಳಿತ ವತಿಯಿಂದ ಜಿಲ್ಲೆಯಾದ್ಯಂತ ಜನರಿಗೆ ನೇರವಾಗಿ ಸಿಪಿಆರ್ (CPR) ಕುರಿತಾದ ಅರಿವು ಮತ್ತು ಪ್ರಾಯೋಗಿಕ ಪ್ರಾತ್ಯಕ್ಷಿಕೆಗಳನ್ನು ತಲುಪಿಸುವ ಉದ್ದೇಶದಿಂದ ರೂಪಿಸಲಾದ 'ಹಾರ್ಟ್ ಸೇಫ್ ತುಮಕೂರು' (Heart Safe Tumkur) ಎಂಬ ಘೋಷಣೆಯೊಂದಿಗೆ ಮಾಸಿಕ ಸಾರ್ವಜನಿಕ ಆರೋಗ್ಯ ಅಭಿಯಾನಕ್ಕೆ ಸೆ.7ರಂದು ಸಾಹೇ ವಿಶ್ವವಿದ್ಯಾನಿಲಯದ ಕುಲಾಧಿಪತಿ ಹಾಗೂ ಕರ್ನಾಟಕ ಸರ್ಕಾರದ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ ಚಾಲನೆ ನೀಡಿದರು.

ಈ ಮಾಸಿಕ ಅಭಿಯಾನವು 7 ಸೆಪ್ಟೆಂಬರ್‌ನಿಂದ 2026ರ ಅಕ್ಟೋಬರ್ 2 ರಂದು ಆಚರಿಸಲಾಗುವ 'ವಿಶ್ವ ಹೃದಯ ದಿನ'ದವರೆಗೆ ನಡೆಯಲಿದೆ. ತುಮಕೂರು ಜಿಲ್ಲೆಯಾದ್ಯಂತ ಸಿಪಿಆರ್ (CPR) ಕುರಿತು ಜಾಗೃತಿ ಜಾಥಾ ಮತ್ತು ಸಾರ್ವಜನಿಕವಾಗಿ ತರಬೇತಿಯನ್ನು ನೀಡಿ ಉದ್ದೇಶದಿಂದ 'ಹಾರ್ಟ್ ಸೇಫ್ ತುಮಕೂರು' (Heart Safe Tumkur) ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ಒಂದು ತಿಂಗಳ ಕಾಲ ನಡೆಯಲಿರುವ ಈ ಸಂಚಾರಿ ಅಭಿಯಾನವು ತುಮಕೂರಿನ ವಿವಿಧ ಜನ ಸಮುದಾಯಗಳನ್ನು ತಲುಪಲಿದೆ. ಸೆ.7ರಿಂದ ಆರಂಭಗೊಂಡು ಅಕ್ಟೋಬರ್ 2, 2026 ರಂದು ಮುಕ್ತಾಯವಾಗಲಿದೆ.

ಹಾರ್ಟ್ ಸೇಫ್ ತುಮಕೂರು'–ಸಿಪಿಆರ್ ಅಭಿಯಾನಕ್ಕೆ ಚಾಲನೆ ನೀಡಿದ ಸಾಹೇ ವಿಶ್ವವಿದ್ಯಾನಿಲಯದ ಕುಲಾಧಿಪತಿ ಹಾಗೂ ಕರ್ನಾಟಕ ಸರ್ಕಾರದ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ ಅವರು ಮಾತನಾಡಿ, ಹಠಾತ್ ಹೃದಯಾಘಾತ ಸಂಭವಿಸಿದಾಗ ಆಸ್ಪತ್ರೆಗೆ ತಲುಪುವ ಮೊದಲು ನೀಡುವ ಸಿಪಿಆರ್ ಪ್ರಾಣ ರಕ್ಷಣೆಯಲ್ಲಿ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ. ಈ ನಿಟ್ಟಿನಲ್ಲಿ 'ಹಾರ್ಟ್ ಸೇಫ್ ತುಮಕೂರು' ಅಭಿಯಾನದ ಮೂಲಕ 320 ಗ್ರಾಮ ಪಂಚಾಯಿತಗಳ ಯುವಜನರು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಸಿಬ್ಬಂದಿ, ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸಿಪಿಆರ್ ತರಬೇತಿ ನೀಡಲಾಗುವುದು ಎಂದು ತಿಳಿಸಿದರು.

ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಕಾರ್ಡಿಯೋಥೊರಾಸಿಕ್ ಮುಖ್ಯಸ್ಥರಾದ ಡಾ. ತಮೀಮ್ ಅಹ್ಮದ್ ಹಾಗೂ ಅವರ ವೈದ್ಯಕೀಯ ತಂಡ ನೀಡುತ್ತಿರುವ ಸೇವೆಯನ್ನು ಪ್ರಶಂಸಿಸದರು. ಇದುವರೆಗೂ ಈ ಕೇಂದ್ರದಿಂದ 10 ಸಾವಿರಕ್ಕೂ ಹೆಚ್ಚು ಪ್ರಕಿಯೆಗಳು, 500ಕ್ಕೂ ಹೆಚ್ಚು ಯಶಸ್ವಿ ಓಪನ್ ಹಾರ್ಟ್ ಸರ್ಜರಿಗಳು ನಡೆದು ಸಾವಿರಾರು ಜನರ ಪ್ರಾಣ ಉಳಿದಿದೆ ಎಂದು ಡಾ. ಜಿ.ಪರಮೇಶ್ವರ ಅವರು ಹೇಳಿದರು.

ಇತ್ತೀಚಿಗೆ ಹೆಚ್ಚಿನವರು ಹೃದಯಾಘಾತದಿಂದ ಸಾಯುತ್ತಿದ್ದಾರೆ. ಯುವಕರು ಕೂಡಾ ಹೃದಯಾಘಾತಕ್ಕೆ ಬಲಿಯಾಗುತ್ತಿದ್ದಾರೆ, ಹೀಗಿರುವಾಗ ಅದನ್ನು ತಡೆಗಟ್ಟಲು ಪ್ರತಿಯೊಬ್ಬರೂ ಸಿಪಿಆರ್ ಬಗ್ಗೆ ಕಲಿಯುವುದು ಬಹಳ ಮುಖ್ಯ. ಯಾರಿಗೆ ಯಾವ ಸಂದರ್ಭದಲ್ಲಿ ಹೃದಯಾಘಾತವಾಗುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ಕನಿಷ್ಠ ಪಕ್ಷ ಸಿಪಿಆರ್ ಮಾಡಿಕೊಳ್ಳುವುದು ಹೇಗೆ ಎಂದು ತಿಳಿದಿದ್ದರೆ ಕನಿಷ್ಟ ಒಂದು ಜೀವವನ್ನು ಉಳಿಸಬಹುದು.

ತುಮಕೂರು ಜಿಲ್ಲಾಧಿಕಾರಿಯಾದ ಶ್ರೀಮತಿ ಶುಭಾ ಕಲ್ಯಾಣ್ ಅವರು ಭಾಗವಹಿಸಿ ಮಾತನಾಡಿ, 'ಹಾರ್ಟ್ ಸೇಫ್ ತುಮಕೂರು' ಎಂಬ ವಿಶಿಷ್ಟ ಕಲ್ಪನೆಯನ್ನು ಡಾ. ತಮೀಮ್ ಅಹ್ಮದ್ ಅವರು ತಂದಾಗ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯ ಸಮ್ಮತಿಯೊಂದಿಗೆ ಈ ಜಾಗೃತಿ ಅಭಿಯಾನ ರೂಪಿಸಲಾಗಿದೆ. ಈ ಜಿಲ್ಲೆಯ 2080 ಆಶಾ ಕಾರ್ಯಕರ್ತೆಯರು, ಪೊಲೀಸ್ ಇಲಾಖೆ ಹಾಗೂ 421 ಭಾರತ್ ಜೋಡೋ ಯುವ ಸಂಘಗಳ ಸುಮಾರು 50ಸಾವಿರ ಯುವಕ–ಯುವತಿಯರಿಗೆ 2ನೇ ಪುಟಕ್ಕೆ

ಜಮೀನಿನ ದಾರಿ ವಿಚಾರಕ್ಕೆ ಗಲಾಟೆ ಹಿನ್ನೆಲೆ

ಪೊಲೀಸ್ ಠಾಣೆ ಎದುರು ಅಪ್ಪ–ಮಗ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಜಮೀನಿನ ದಾರಿ ವಿಚಾರಕ್ಕೆ ಸಂಬಂಧಿಸಿದಂತೆ ಗ್ರಾಮದಲ್ಲಿ ನಡೆದ ಗಲಾಟೆ ಹಿನ್ನೆಲೆ ನ್ಯಾಯ ರಕ್ಷಣೆ ಕೋರಿ ಪೊಲೀಸ್ ಠಾಣೆಗಳಿಗೆ ಅಲೆದಾಡಿದ ಅಪ್ಪ–ಮಗ, ದೂರು ಸ್ವೀಕರಿಸದೆ ಸಾಗ ಹಾಕಿದ್ದಾರೆಂಬ ಆರೋಪದಿಂದ ನೊಂದು ಪೊಲೀಸ್ ಠಾಣೆ ಎದುರೇ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ತಿಪಟೂರು ಗ್ರಾಮಾಂತರ ಪೊಲೀಸ್ ಠಾಣೆ ಎದುರು ನಡೆದಿದೆ. ತಿಪಟೂರು ತಾಲೂಕಿನ ನೊಣವಿನಕೆರೆ ಗ್ರಾಮದ ಹುಚ್ಚಪ್ಪ (68) ಹಾಗೂ ಅವರ ಪುತ್ರ ನಾಗರಾಜು (34) ಆತ್ಮಹತ್ಯೆಗೆ ಯತ್ನಿಸಿದವರು. ಜಮೀನಿನ ದಾರಿ ವಿಚಾರಕ್ಕೆ ಸಂಬಂಧಿಸಿದಂತೆ ಗ್ರಾಮದಲ್ಲಿ ಗಲಾಟೆ ನಡೆದಿದ್ದು, ಈ ಸಂಬಂಧ ನ್ಯಾಯ ರಕ್ಷಣೆ ಕೋರಿ ತಂದೆ–ಮಗ ನೊಣವಿನಕೆರೆ ಪೊಲೀಸ್ ಠಾಣೆಗೆ ತೆರಳಿದ್ದರು. ಆದರೆ ದೂರು ಸ್ವೀಕರಿಸದೆ ಪೊಲೀಸರು ಅಲೆದಾಡಿಸಿದ್ದಾರೆ ಎಂದು ಕುಟುಂಬಸ್ಥರು ಗಂಭೀರ ಆರೋಪ ಮಾಡಿದ್ದಾರೆ.

ನೊಣವಿನಕೆರೆ ಪೊಲೀಸ್ ಠಾಣೆಯಲ್ಲಿ ಸ್ಪಂದನೆ ಸಿಗದ ಹಿನ್ನೆಲೆಯಲ್ಲಿ ತಂದೆ–ಮಗ ತಿಪಟೂರು ಗ್ರಾಮಾಂತರ ಪೊಲೀಸ್ ಠಾಣೆಗೆ ತೆರಳಿದ್ದರು. ಅಲ್ಲಿಯೂ ದೂರು ಸ್ವೀಕರಿಸದೆ ಸಾಗಹಾಕಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಠಾಣೆಯಿಂದ ಠಾಣೆಗೆ ಅಲೆದಾಡಿದರೂ ನ್ಯಾಯ ಸಿಗದ ಹಿನ್ನೆಲೆಯಲ್ಲಿ ನೊಂದ ತಂದೆ–ಮಗ, ಕೊನೆಗೆ ತಿಪಟೂರು ಗ್ರಾಮಾಂತರ ಪೊಲೀಸ್ ಠಾಣೆ ಎದುರೇ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ವಿಷ ಸೇವಿಸಿ ಅಸ್ವಸ್ಥಗೊಂಡ ಇಬ್ಬರನ್ನೂ ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದ್ದು, ಹೆಚ್ಚಿನ ಚಿಕಿತ್ಸೆಗೆ ಹಾಸನಕ್ಕೆ ರವಾನಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಫುಟ್‌ಪಾತ್ ಅಂಗಡಿಗಳ ತೆರವು: ಪರ್ಯಾಯ ಜಾಗಕ್ಕಾಗಿ ತಮಟೆ ಚಳವಳಿ

ತುಮಕೂರು: ಸುಪ್ರೀಂಕೋರ್ಟ್ ಆದೇಶದಂತೆ ನಗರ ಪಾಲಿಕೆ ಅಧಿಕಾರಿಗಳು ನಗರದೆಲ್ಲೆಡೆ ಫುಟ್‌ಪಾತ್ ಅಂಗಡಿಗಳನ್ನು ತೆರವು ಮಾಡಿಸಿರುವುದನ್ನು ವಿರೋಧಿಸಿ ವ್ಯಾಪಾರಿಗಳಿಗೆ ಪರ್ಯಾಯ ಜಾಗದ ವ್ಯವಸ್ಥೆ ಮಾಡುವಂತೆ ಒತ್ತಾಯಿಸಿ ಸಮೃದ್ಧಿ ಬೀದಿಬದಿ ವ್ಯಾಪಾರಿಗಳ ಸಂಘದ ನೇತೃತ್ವದಲ್ಲಿ ವ್ಯಾಪಾರಿಗಳು ಸೋಮವಾರ ತಮಟೆ ಚಳವಳಿ ನಡೆಸಿದರು.

ವಿವಿಧ ಕನ್ನಡಪರ ಸಂಘಟನೆಗಳು, ಜಿಲ್ಲಾ ಜೆಡಿಎಸ್, ದಲಿತ ಸಂಘರ್ಷ ಸಮಿತಿ ಮತ್ತಿತರ ಸಂಘಟನೆಗಳ ಮುಖಂಡರು ಚಳವಳಿಯನ್ನು ಬೆಂಬಲಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಗುಬ್ಬಿ ತಾಲ್ಲೂಕು ಗೊಲ್ಲಹಳ್ಳಿ ಮಠದ ವಿಭವ ವಿದ್ಯಾಶಂಕರ ಸ್ವಾಮೀಜಿ ಅಂಬೇಡ್ಕರ್ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿ ಪ್ರತಿಭಟನೆಗೆ ಚಾಲನೆ ನೀಡಿದರು.

ಸುಪ್ರೀಂಕೋರ್ಟ್ ಆದೇಶದಂತೆ ಅಧಿಕಾರಿಗಳು ಬೀದಿ ಬದಿಯ ಅಂಗಡಿಗಳನ್ನು ತೆರವು ಮಾಡಿದ್ದು, ಇದರಿಂದ ಬೀದಿಬದಿಯಲ್ಲಿ ವ್ಯಾಪಾರ ಮಾಡಿಕೊಂಡು ಜೀವನ ನಿರ್ವಹಣೆ ಮಾಡಿಕೊಂಡಿದ್ದ ಬಡ ಕುಟುಂಬಗಳ ಬೀದಿಪಾಲಾಗಿವೆ. ಈ ಕುಟುಂಬಗಳಿಗೆ ಸರ್ಕಾರ, ಜಿಲ್ಲಾಡಳಿತ ಪುನರ್ ವ್ಯವಸ್ಥೆ ಕಲ್ಪಿಸಿ ಅವರ ಬದುಕಿಗೆ ನೆರವಾಗಬೇಕುಎಂದು ಸ್ವಾಮೀಜಿ ಹೇಳಿದರು.



ಕನ್ನಡಸೇನೆ ಜಿಲ್ಲಾಧ್ಯಕ್ಷ ಡಾ.ಧನಿಯಾ ಕುಮಾರ್ ಮಾತನಾಡಿ, ಫುಟ್‌ಪಾತ್ ಅಂಗಡಿಗಳ ತೆರವಿನಿಂದಾಗಿ ನಗರದ ಸಾವಿರಾರು ಬೀದಿಬದಿ ವ್ಯಾಪಾರಿಗಳ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಸುಪ್ರೀಂಕೋರ್ಟ್ ಆದೇಶದಂತೆ ಫುಟ್‌ಪಾತ್ ಅಂಗಡಿಗಳನ್ನು ತೆರವು ಮಾಡಲಾಗಿದೆಎಂದು ಅಧಿಕಾರಿಗಳು ಹೇಳುತ್ತಾರೆ. ಕಾನೂನು ಕೇವಲ ಬಡವರಿಗೆ ಮಾತ್ರ ಅನ್ವಯವಾಗುತ್ತದೆಯೆ? ರಾಜ ಕಾಲುವೆ ಮೇಲೆ ಕಟ್ಟಡ ಕಟ್ಟಿದ ಶ್ರೀಮಂತರು, ಪಾರ್ಕ್‌ಗಳನ್ನು ಒತ್ತುವರಿ ಮಾಡಿ ಕೊಂಡವರಿಗೆ ಕಾನೂನು ಕ್ರಮ ಇಲ್ಲವೆ? ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು.

ನಗರ ಪಾಲಿಕೆಯ ಜೆಸಿಬಿಗಳು ಬಡವರ ಫುಟ್‌ಪಾತ್ ಅಂಗಡಿ ಮೇಲೆ ದಾಳಿ ಮಾಡುತ್ತವೆ, ಶ್ರೀಮಂತರು ಒತ್ತುವರಿ ಮಾಡಿಕೊಂಡ ಜಾಗದ ಮೇಲೆ ದಾಳಿ ಮಾಡುವುದಿಲ್ಲವೆ? ಕಾನೂನು ಬಡವರಿಗೆ ಒಂದು ರೀತಿ, ಶ್ರೀಮಂತರಿಗೆ ಒಂದು ರೀತಿ ಇದೆಯೆ? ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಡಾ.ಧನಿಯಾಕುಮಾರ್, ತೆರವು ಮಾಡಿರುವ ಫುಟ್‌ಪಾತ್ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಿ ಕೊಡಬೇಕು ಎಂದು ಒತ್ತಾಯಿಸಿದರು.

ನಗರ ಪಾಲಿಕೆ ಕಚೇರಿ ಎದುರು ತಮಟೆ ಬಾರಿಸಿ ಚಳವಳಿ ನಡೆಸಿದರು. ನಂತರ ಜಿಲ್ಲಾಧಿಕಾರಿಗಳ ಕಚೇರಿ ವರೆಗೆ ಪಾದಯಾತ್ರೆ ಸಾಗಿ ಡಿ.ಸಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ನಗರ ಪಾಲಿಕೆ ಅಧಿಕಾರಿಗಳ ಈ ಕ್ರಮದಿಂದ ನಗರದ ಎರಡೂವರೆ ಸಾವಿರಕ್ಕೂ ಹೆಚ್ಚು ಬೀದಿಬದಿ ವ್ಯಾಪಾರ ಮಾಡುತ್ತಿದ್ದ ವ್ಯಾಪಾರಿಗಳಿಗೆ ನಗರದ ಪ್ರಮುಖ ಜಾಗಗಳಲ್ಲಿ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಬೀದಿಬದಿ ವ್ಯಾಪಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಸಮೃದ್ಧಿ ಬೀದಿಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಟಿ.ಕೆ. ಮಂಜುನಾಥ್, ಉಪಾಧ್ಯಕ್ಷ ಗಂಗಸಂದ್ರ ರಾಜು,ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಪಿ.ಎನ್, ರಾಮಯ್ಯ, ಮುಖಂಡರಾದ ಮೀಸೆ ಸತೀಶ್, ಮಂಜು ಭಾರ್ಗವ್, ಜೆಡಿಎಸ್ ನಗರ ಘಟಕ ಅಧ್ಯಕ್ಷ ಟಿ.ಹೆಚ್. ಜಯರಾಮ್, ಕಾರ್ಯಾಧ್ಯಕ್ಷ ಮೋಹನ್ ಕುಮಾರ್, ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ರೇಖಾ ರಾಜ್ ಗೌಡ, ಎಸ್.ಸಿ.ಘಟಕ ಜಿಲ್ಲಾಧ್ಯಕ್ಷ ಬೆಳಗುಂಬ ವೆಂಕಟೇಶ್, ಪ್ರಚಾರ ಸಮಿತಿ ಅಧ್ಯಕ್ಷ ಕೆಂಪರಾಜು, ನಗರಪಾಲಿಕೆ ಮಾಜಿ ಸದಸ್ಯ ಎ. ಶ್ರೀನಿವಾಸ್, ಮುಖಂಡರಾದ ಮೀಸೆ ಸತೀಶ್, ಜಹಂಗೀರ್‌ರವೀಶ್, ನೇತಾಜಿ ಶ್ರೀಧರ್, ಮಂಡಿಟಿ.ಎನ್. ಚಂದ್ರಶೇಖರ್, ಕನ್ನಡ ಸೇನೆ ನಗರಅಧ್ಯಕ್ಷ ವಿಠಲ್ ಸೇರಿದಂತೆ ಎಲ್ಲಾ ಬಡಾವಣೆಗಳ ಬೀದಿಬದಿ ವ್ಯಾಪಾರಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸೂರ್ಯ ಪ್ರಗತಿ

ಕನ್ನಡ ದಿನ ಪತ್ರಿಕೆ

ಏಯ್...ಅರ್ಜಿ ಕೊಟ್ಟು ಹೋಗ್ಬೇಕು ಅಷ್ಟೇ, ಜಾಸ್ತಿ ಮಾತಾಡಬೇಡ

ಅರ್ಜಿ ಸಲ್ಲಿಸಲು ಹೋದವರ ಮೇಲೆ ಬೆದರಿಕೆ ಹಾಕಿರುವುದು ಖಂಡನೀಯ–ಎಎಪಿ



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಸರಕಾರದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಪಾವಗಡ ತಾಲೂಕಿನ ಒತ್ತುವರಿಯಾಗಿರುವ ಸಂತೆ ಮೈದಾನದ ಒತ್ತುವರಿ ತೆರವುಗೊಳಿಸುವಂತೆ ಮನವಿ ಮಾಡಲು ಅರ್ಜಿ ಸಲ್ಲಿಸಿದ ಅಮ್ ಆದ್ಮಿ ಪಾರ್ಟಿಯ ಪಾವಗಡ ತಾಲೂಕು ಅಧ್ಯಕ್ಷರನ್ನು ಏಕ ವಚನದಲ್ಲಿ ಮಾತನಾಡಿಸಿ, ಸ್ಥಳದಿಂದ ತೆರಳುವಂತೆ ಬೆದರಿಕೆ ಹಾಕಿರುವುದು ಖಂಡನೀಯ ಎಂದು ಎಎಪಿ ಪಕ್ಷದ ಜಿಲ್ಲಾಧ್ಯಕ್ಷ ಜಯರಾಮಯ್ಯ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಆಸ್ತಿ ಉಳಿಸಬೇಕೆಂದು ಮನವಿ ಸಲ್ಲಿಸಲು ಹೋದ ಸಾರ್ವಜನಿಕರ ಮೇಲೆ ಈ ರೀತಿ ಏಕಾಏಕಿ ಪ್ರಚೋದನೆಗೆ ಒಳಗಾಗದವರಂತೆ ವರ್ತಿಸಿರುವುದು, ಓರ್ವ ಜನ ಪ್ರತಿನಿಧಿಗೆ ಶೋಭೆ ತರುವಂತಹದಲ್ಲ. ಹಾಗಾಗಿ ಅವರು ಸಾರ್ವಜನಿಕವಾಗಿ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

ಪಾವಗಡ ತಾಲ್ಲೂಕು ವೈ.ಎನ್.ಹೊಸಕೋಟೆ ಗ್ರಾಮದ ಸರ್ವೆ ನಂ 245/2 ರಲ್ಲಿ 3 ಎಕರೆ ಸಂತೆ ಮೈಧಾನದ ಜಮೀನಿನಲ್ಲಿ 29 ಗುಂಟೆ ಜಾಗವನ್ನು ಒತ್ತುವರಿ ಮಾಡಿಕೊಂಡು, ಗ್ರಾಮ ಪಂಚಾಯಿತಿಯಿಂದ ಅನುಮತಿ ಪಡೆಯದೆ ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ. ಸದರಿ ಒತ್ತುವರಿ ತೆರವಿಗೆ ಈಗಾಗಲೇ ಸುಪ್ರೀಂ ಕೋರ್ಟ್ ಸಹ ಆದೇಶ ಮಾಡಿದೆ. ಅಲ್ಲದೆ ಸರ್ವೆ ಇಲಾಖೆ ಸಹ ಸಂತೆ ಮೈದಾನವನ್ನು ಅಳತೆ ಮಾಡಿ ಒತ್ತುವರಿಯಾಗಿರುವುದನ್ನು ದೃಢಪಡಿಸಿ, ಜಿಲ್ಲಾಡಳಿತಕ್ಕೆ ವರದಿ ಮಾಡಿದೆ. ಹೀಗಿದ್ದರೂ ಸಹ ಒತ್ತುವರಿ ತೆರವಾಗದಿರುವುದನ್ನು ಪ್ರಶ್ನಿಸಿ ಪ್ರಜಾ ಸೇವಾ ಆಂದೋಲನದಲ್ಲಿ ಅರ್ಜಿ ಸಲ್ಲಿಸಲು ಹೋದ ಸಂಧರ್ಭದಲ್ಲಿ ಉದ್ಧಟತನದಿಂದ ಶಾಸಕರಾದ ವಿ.ವೆಂಕಟೇಶ್ ವರ್ತಿಸಿದ್ದಾರೆ. ಅಲ್ಲದೆ ಸರಕಾರದ ಕಾರ್ಯಕ್ರಮದಲ್ಲಿ ಪಕ್ಷದ ಕಾರ್ಯಕರ್ತರನ್ನ ವೇದಿಕೆಯ ಮೇಲೆ ಕೂರಿಸಿ, ಮನವಿ ನೀಡಲು ಬಂದ ಸಾರ್ಜನಿಕರನ್ನು ಬೆದರಿಸುವ ಕೆಲಸ ಮಾಡಲಾಗುತ್ತಿದೆ. ಜಿಲ್ಲಾಡಳಿತ ಕೂಡಲೇ ಸುಪ್ರಿಂ ಕೋರ್ಟಿನ ತೀರ್ಪಿನ ಅನ್ವಯ ಒತ್ತುವರಿಯಾಗಿರುವ ಸಂತೆ

ಸಮಾಜದ ಅತ್ಯಂತ ಗೌರವಾನ್ವಿತ ಹುದ್ದೆ ಶಿಕ್ಷಕನದ್ದು;ಆತ ವಿದ್ಯಾರ್ಥಿಗಳ ಭವಿಷ್ಯದ ದಾರಿದೀಪ



ಸಮಾಜದ ಅತ್ಯಂತ ಗೌರವಾನ್ವಿತ ಹುದ್ದೆ ಶಿಕ್ಷಕನಾಗಿದ್ದು ಆತ ವಿದ್ಯಾರ್ಥಿಗಳ ಭವಿಷ್ಯದ ದಾರಿದೀಪವಾಗಿದ್ದು ಆತನಿಗೆ ತನ್ನನ್ನು ತಾನು ಅರಿತುಕೊಳ್ಳಲು ಸಹಾಯ ಮಾಡುವ ರಾಷ್ಟ್ರ ನಿರ್ಮಾಣದ ಶಿಲ್ಪಿ ಎನಿಸಿಕೊಂಡಿದ್ದಾನೆ ಎಂದು ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆಯ ಜಂಟಿ ಕಾರ್ಯದರ್ಶಿಗಳಾದ ಡಾ. ಶಿವಕುಮಾರಯ್ಯ ಅಭಿಪ್ರಾಯಪಟ್ಟರು. ಅವರು ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆಯ ಪದವಿ ಕಾಲೇಜುಗಳ ಆಶ್ರಯದಲ್ಲಿ ನಗರದ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ವ್ಯಕ್ತಿತ್ವ ನಿರ್ಮಾಣವೇ ಶಿಕ್ಷಣದ ಗುರಿಯಾಗಬೇಕು. ಶಿಕ್ಷಕ ಸದಾ ಅಧ್ಯಯನಶೀಲನಾಗಿರಬೇಕು. ತನ್ನ ವಿದ್ಯಾರ್ಥಿಯಲ್ಲಿರುವ ಸಾಮರ್ಥ್ಯವನ್ನು ಹೊರತೆಗೆಯುವ ಶಕ್ತಿ ಶಿಕ್ಷಕನಿಗಿದೆ. ಆತ ಕೇವಲ ಪಠ್ಯಕ್ರಮಕ್ಕೆ ತನ್ನ ತರಗತಿಯನ್ನು ಸೀಮಿತಗೊಳಿಸಿಕೊಳ್ಳದೆ ಪಠ್ಯದಿಂದಾಚೆಗಿನ ವಿದ್ಯಾರ್ಥಿಯ ಚಿಂತನೆಯ ಚೇತನವನ್ನು ಜಾಗೃತಿಗೊಳಿಸಿ ಆತನ ವ್ಯಕ್ತಿತ್ವವನ್ನು ವಿಕಸನಗೊಳಿಸಬೇಕು ಎಂದರು.

ವಿಶೇಷ ಉಪನ್ಯಾಸ ನೀಡಿದ ವಿಶ್ರಾಂತ ಪ್ರಾಂಶುಪಾಲರು ಚಿಂತಕರೂ ಆದ ಡಾ. ಹೆಚ್.ಎಸ್. ನಿರಂಜನಾರಾಧ್ಯ ಮಾತನಾಡಿ ಭಾರತದ ಗುರು ಶಿಷ್ಯ ಸಂಪ್ರದಾಯವು ವಿಶ್ವಾದ್ಯಂತ ಪ್ರಸಿದ್ಧವಾಗಿತ್ತು. ಆದರೆ ಕ್ರಮೇಣ ಈ ಸಂಪ್ರದಾಯ ಎಷ್ಟೋ ಕಡಿಮೆಯಾಗಿದೆ. ಇಂದು ಭಾರತವನ್ನು ಮತ್ತೊಮ್ಮೆ ವಿಶ್ವ ಶಿಕ್ಷಕನನ್ನಾಗಿ ಮಾಡಲು ಆ ಸಂಪ್ರದಾಯವನ್ನು ಪುನರುಜ್ಜೀವನಗೊಳಿಸಬೇಕಾಗಿದೆ ಎಂದರು.

ಇದು ಡಿಜಿಟಲ್ ಯುಗ ಕೃತಕ ಬುದ್ಧಿಮತ್ತೆ ಉದ್ಯೋಗಾಂಕ್ಷಿಗಳ ಉದ್ಯೋಗದ ಆಸೆಯನ್ನು ಕಮರಿಸುತ್ತಿದೆ. ಕೆಲ ರಾಷ್ಟ್ರಗಳಲ್ಲಿ ರೋಬೋಟ್ ಶಿಕ್ಷಕರು ತರಗತಿಗಳಲ್ಲಿ ಪಾಠ ಹೇಳಿಕೊಡುತ್ತಿದ್ದಾರೆ. ಇಂತಹ ವಾತಾವರಣದಲ್ಲಿ ಇಂದಿನ ಶಿಕ್ಷಕ ತನ್ನ ಜ್ಞಾನಶಕ್ತಿಯನ್ನು ಹೆಚ್ಚಿಸಿಕೊಳ್ಳದೆ ಹೋದರೆ ಆತ ನಿರುದ್ಯೋಗಿಯಾಗಬೇಕಾಗುತ್ತದೆ ಎಂದು ಎಚ್ಚರಿಸಿದ ಅವರು ಇಂದಿನ ವಿದ್ಯಾರ್ಥಿ ಸಮುದಾಯಕ್ಕೆ ಸರಿಯಾದ ಮಾರ್ಗದರ್ಶನ ಮಾಡುವ ಮೂಲಕ ಆತನನ್ನು ಕತ್ತಲಿನಿಂದ ಬೆಳಕಿನೆಡೆಗೆ ಕರೆದೊಯ್ಯುವ ಶಕ್ತಿಯನ್ನು ಶಿಕ್ಷಕ ಪಡೆದುಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ವಿಶ್ರಾಂತ ಪ್ರಾಂಶುಪಾಲರಾದ ಪ್ರೊ. ಎಂ.ಬಿ. ಸದಾಶಿವಯ್ಯ ಸತತ 62 ವರ್ಷಗಳಿಂದಲೂ ಶಿಕ್ಷಕನಾಗಿ ಕರ್ತವ್ಯ ಮುಂದುವರಿಸುತ್ತಿರುವ ನಾನು ಶಿಕ್ಷಕ ವೃತ್ತಿಯನ್ನು ಇಷ್ಟಪಟ್ಟು ಆರಿಸಿಕೊಂಡೆ. ಪ್ರತಿಯೊಬ್ಬ ಶಿಕ್ಷಕರೂ ಡಾ. ಎಸ್. ರಾಧಾಕೃಷ್ಣನ್‌ರವರಂತೆ ಶಿಕ್ಷಕ ವೃತ್ತಿಯನ್ನು ಪ್ರೀತಿಸಬೇಕು. ಒಬ್ಬ ಶಿಕ್ಷಕ ತನ್ನ ಸಾಮರ್ಥ್ಯದಿಂದ ಎಂತಹ ವಿದ್ಯಾರ್ಥಿಯನ್ನಾದರೂ ಮೇಲೆ ತರಲು ಸಾಧ್ಯ ಎಂಬುದನ್ನು ತಾವೆಲ್ಲರೂ ತೋರಿಸಬೇಕು. ಶಿಕ್ಷಕ ವಿದ್ಯಾರ್ಥಿಗಳ ಮಟ್ಟಕ್ಕೆ ಇಳಿದು ಪಾಠ ಪ್ರವಚನಗಳನ್ನು ಮಾಡಿದರೆ ಆತ ಆ ಸಮುದಾಯದಲ್ಲಿ ಜನಪ್ರಿಯ ಶಿಕ್ಷಕನಾಗಲು ಸಾಧ್ಯ ಎಂದರು. ಶ್ರೀ ಸಿದ್ಧಗಂಗಾ ಮಹಿಳಾ ಕಾಲೇಜಿನಲ್ಲಿ ಪ್ರಾಧ್ಯಾಪಕಿಯಾಗಿ ನಿವೃತ್ತಿ ಹೊಂದಿರುವ ಪ್ರೊ. ಎಂ.ಎಸ್. ವಿಜಯಕುಮಾರಿ ಅವರನ್ನು ಸನ್ಮಾನಿಸಲಾಯಿತು. ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆಯ ಪದವಿ ಕಾಲೇಜಿನ ಸಂಯೋಜನಾಧಿಕಾರಿಗಳಾದ ಡಾ. ಡಿ.ಎನ್. ಯೋಗೀಶ್ವರಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರಾಂಶುಪಾಲ ಬಿ. ಮಾರಪ್ಪ ಸ್ವಾಗತಿಸಿದರು. ಪ್ರಾಂಶುಪಾಲರಾದ ಡಾ. ರೇವಣಸಿದ್ದಪ್ಪ ವಂದಿಸಿದರು. ಡಾ. ಸೌಮ್ಯಶ್ರೀ ನಿರೂಪಿಸಿದರು.

ಫೋಟೋ ಶೀರ್ಷಿಕೆ : ನಗರದ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಸಭಾಂಗಣದಲ್ಲಿ ಸಿದ್ಧಗಂಗಾ ಪದವಿ ಕಾಲೇಜುಗಳ ಆಶ್ರಯದಲ್ಲಿ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆಯಲ್ಲಿ ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆಯ ಹಿರಿಯ ಶಿಕ್ಷಕರಾಗಿ ನಿವೃತ್ತಿಯಾಗಿರುವ ಪ್ರೊ. ಎಂ.ಬಿ. ಸದಾಶಿವಯ್ಯ,

ಸೆ.17ರಂದು ಶ್ರೀ ವಿಶ್ವಕರ್ಮ ಜಯಂತಿ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಜಿಲ್ಲಾಡಳಿತದ ವತಿಯಿಂದ ಸೆಪ್ಟೆಂಬರ್ 17ರಂದು ಹಮ್ಮಿಕೊಳ್ಳುವ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಸಮುದಾಯದ 15 ಸಾಧಕರನ್ನು ಗುರುತಿಸಿ ಸನ್ಮಾನಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ಅವರಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಜಯಂತಿ ಕಾರ್ಯಕ್ರಮವನ್ನು ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಏರ್ಪಡಿಸಲು ರಂಗಮಂದಿರವನ್ನು ಕಾಯ್ದಿರಿಸಬೇಕು. ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಶಿಷ್ಟಾಚಾರದಂತೆ ಮುದ್ರಿಸಿ, ಜನಪ್ರತಿನಿಧಿಗಳಿಗೆ ಹಾಗೂ ಸಂಘ ಸಂಸ್ಥೆಗಳಿಗೆ ತಲುಪಿಸಬೇಕು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲು ನಿವೃತ್ತ ಜಿಲ್ಲಾಧಿಕಾರಿ ಹಾಗೂ ಕರ್ನಾಟಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ: ಸಿ ಸೋಮಶೇಖರ್ ಅವರನ್ನು ಆಹ್ವಾನಿಸಬೇಕು. ವ್ಯವಸ್ಥೆ ಮಾಡಬೇಕು. ಶ್ರೀ ವಿಶ್ವಕರ್ಮರ ಕುರಿತಂತೆ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲು ಕ್ರಮ ಕೈಗೊಳ್ಳಬೇಕು. ಜಯಂತಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ವಿಶ್ವಕರ್ಮ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ನಾಗರಾಜಾಚಾರ್, ಹರೀಶಾಚಾರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಸಿಂಗದಹಳ್ಳಿಕೆರೆಗೆ ಹೇಮಾವತಿ ನೀರುಹರಿಸಲು ಅಗತ್ಯಕ್ರಮ–ಸುರೇಶ್‌ಬಾಬು



ಚಿಕ್ಕನಾಯಕನಹಳ್ಳಿ:–ತಾಲ್ಲೂಕಿನ ಕಂದಿಕೆರೆ ಹೋಬಳಿಯ ಸಿಂಗದಹಳ್ಳಿ ಕೆರೆಗೆ ಗುಬ್ಬಿ ತಾಲ್ಲೂಕಿನ ಗಂಗಮ್ಮನಕಟ್ಟೆಯಿಂದ ನೈಸರ್ಗಿಕವಾಗಿ ಹಳ್ಳದ ಮೂಲಕ ಹರಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ಶಾಸಕರ ಗೃಹಕಚೇರಿಗೆ ಬೇಟಿ ನೀಡಿದ್ದ ಕಂದಿಕೆರೆ ಹೋಬಳಿಯ ಸಿಂಗದಹಳ್ಳಿ ತೀರ್ಥಪುರ, ಮದನಮಡು, ಬರಶಿಡ್ಲಹಳ್ಳಿ, ಕಾತ್ರಿಕೆಹಾಳ್ ಭಾಗದ ರೈತರು ಸಿಂಗದಹಳ್ಳಿಕೆರೆಗೆ ನೀರುಹರಿಸುವಂತೆ ನೂರಾರು ರೈತರು ಬೇಟಿ ಮಾಡಿದ ಸಂದರ್ಭದಲ್ಲಿ ಮಾತನಾಡಿದ ಅವರು ಗುಬ್ಬಿ ತಾಲ್ಲೂಕಿನ ಅಪ್ಪೇನಹಳ್ಳಿಯ ಗಂಗಮ್ಮ ಕಟ್ಟೆಗೆ ಹೇಮಾವತಿ ನೀರಾವರಿಯ ತುಮಕೂರು ಮುಖ್ಯ ಕೆನಾಲ್ ನಿಂದ ಏತನೀರಾವರಿಯ ಮೂಲಕ ನೀರು ಹರಿಸಲಾಗುತ್ತಿದ್ದು ಈ ಕಟ್ಟೆಯಿಂದ ತಾಲ್ಲೂಕಿನ ಸಿಂಗದಹಳ್ಳಿಕೆರೆಗೆ ಗುರುತ್ವಾಕರ್ಷಣೆಯ ಮೂಲಕ ಸರಗವಾಗಿ ನೀರು ಹರಿಸಿದರೆ ನಮ್ಮ ಭಾಗದ ಕುಡಿಯುವ ನೀರಿನ ಸಮಸ್ಯೆ ಹಾಗೂ ರೈತರಿಗೆ ಅನುಕೂಲವಾಗಲಿದೆ ಎಂಬ ವಿಷಯವನ್ನು ಅಧಿಕರಿಗಳೊಂದಿಗೆ ಚರ್ಚೆ ಮಾಡಲಾಗಿದ್ದು ಮುಂದಿನ ದಿನಗಳಲ್ಲಿ ಈ ಬಾಗದ ಕೆರೆಗಳಿಗೆ ಯಾವ ರೀತಿ ನೀರು ಹರಿಸಬಹುದು ಎಂಬ ಯೋಜನೆಯನ್ನು ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಸಿಂಗದಹಳ್ಳಿ ರಾಜ್‌ಕುಮಾರ್ ಮಾತನಾಡಿ ಈ ವರ್ಷ ಮಳೆಯ ಅಭಾವದಿಂದ ಬರದ ತೀವ್ರತೆಯಿಂದ ಸಿಂಗದಹಳ್ಳಿ, ಬರಸಿಡ್ಲಹಳ್ಳಿ, ಕೊಟ್ಟಿಗಲ್, ದೊಡ್ಡರಾಂಪುರ, ಚಿಕ್ಕರಾಂಪುರ, ಮದನಮಡು, ಗಳಿಗೆಕೆರೆ, ಕಾತ್ರಿಕೆಹಾಲ್, ತೀರ್ಥಪುರ, ಗೊಂದಿಗಪ್ಪನ ಪಾಳ್ಯ ಮತ್ತು ಸುತ್ತ ಮುತ್ತಲಿನ ಗ್ರಾಮದ ಜನರಿಗೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಜಾಸ್ತಿ ಆಗಿದ್ದು ನೀರಿನ ಅಭಾವ ತಪ್ಪಿಸಲು ಸಿಂಗದಹಳ್ಳಿ ದಳವಾಯಿ ಕೆರೆಗೆ ಹೇಮಾವತಿ ನೀರು ಹರಿಸಬೇಕು" ಸಿಂಗದಹಳ್ಳಿ ದಳವಾಯಿ ಕೆರೆಯನ್ನು ನೀರು ಸಂರಕ್ಷಣಾ ಘಟಕವಾಗಿ ಸ್ಥಾಪಿಸಿರುವುದರಿಂದ ಸಿಂಗದಹಳ್ಳಿ ಕೆರೆಯಿಂದ ಸುತ್ತಮುತ್ತಲಿನ ಆಜು– ಬಾಜು ಗ್ರಾಮದ ಕೆರೆಗಳಿಗೆ ನೀರು ಹರಿಸಬಹುದು, ಬೇರೆ ಕೆರೆಗಳಿಗೆ ನೀರು ಹರಿಸಬೇಕೆಂದರೆ ಮೊದಲು ಸಿಂಗದಹಳ್ಳಿ ಕೆರೆಗೆ ಹೇಮಾವತಿ ನೀರು ಹರಿಸುವ ಕೆಲಸ ಮಾಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ಗ್ರಾ.ಪಂ.ಅಧ್ಯಕ್ಷ ನಾಗಭೂಷಣ್ ಮಾತನಾಡಿ ಗುಬ್ಬಿ ತಾಲ್ಲೂಕು ಬೋಗಸಂದ್ರ ಕೆರೆಕೋಡಿಯಲ್ಲಿರುವ ಕಾಲುವೆಯಿಂದ ಸಿಂಗದಹಳ್ಳಿ ಕೆರೆ ಕೇವಲ ಎರಡುವರೆ ಇಂದ ಮೂರು ಕಿಲೋ ಮೀಟರ್ ಅಂತರದಲ್ಲಿ ಇದೆ. ಸಿಂಗದಹಳ್ಳಿ ಕೆರೆಗೆ ನೀರು ಹರಿಸಲು ಯಾವುದೇ ರೀತಿಯ ಹಣದ ಖರ್ಚು ಮಾಡಬೇಕಿಲ್ಲ. ನೈಸರ್ಗಿಕವಾಗಿ ಗಂಗಮ್ಮನ ಕಟ್ಟೆಯಿಂದ ಸಿಂಗದಹಳ್ಳಿ ದಳವಾಯಿ ಕೆರೆಯ ಹಳ್ಳಕ್ಕೆ ನೀರು ಹರಿಸಿದರೆ ಸರಾಗವಾಗಿ ಸಿಂಗದಹಳ್ಳಿ ಕೆರೆಗೆ ನೀರು ಹರಿಯುತ್ತದೆ ಅದ್ದರಿಂದ ಈ ಬಗ್ಗೆ ಕ್ರಮಕೈಗೊಳ್ಳಬೇಕು ಎಂದರು.

ಹೇಮಾವತಿ ಇಂಜಿನಿಯರ್ ಪ್ರಭಾಕರ್ ಮಾತನಾಡಿ ಸಿಂಗದಹಳ್ಳಿ ಭಾಗಕ್ಕೆ ಹೇಮಾವತಿ ನೀರನ್ನು ಹರಿಸುವುದರ ಬಗ್ಗೆ ಸ್ಥಳಪರಿಶೀಲನೆ ನಡೆಸಲು ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ನಂತರ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಮಾಜಿ ಗ್ರಾ.ಪಂ. ಅಧ್ಯಕ್ಷರುಗಳಾದ , ದೊಡ್ಡರಂಗಯ್ಯ, ಮುಖಂಡರುಗಳಾದ ಪ್ರಸನ್ನಕುಮಾರ್, ಮಂಜುನಾಥ್ ಸೇರಿದಂತೆ ಇತರರು ಇದ್ದರು

ಸೂರ್ಯಪ್ರಗತಿನ್ಯೂಸ್.ಕಾಂ

ಸಾಲ ಸೌಲಭ್ಯ : ಮಡಿವಾಳ ಸಮುದಾಯದವರಿಂದ ಅರ್ಜಿ ಆಹ್ವಾನ

ತುಮಕೂರು: ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮವು ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ನೀಡಲು ಮಡಿವಾಳ ಸಮುದಾಯದವರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಫಲಾಪೇಕ್ಷಿಗಳು ಸಾಲ ಸೌಲಭ್ಯಕ್ಕಾಗಿ ಸ್ವಯಂ ಉದ್ಯೋಗ, ಅರಿವು–ಶೈಕ್ಷಣಿಕ(ನೂತನ), ಅರಿವು–ಶೈಕ್ಷಣಿಕ(ನವೀಕರಣ), ಆಧುನಿಕ ಲ್ಯಾಂಡ್ರಿ(ಪ್ರಸ್ತುತ ಸಾಲಿನ ಹೊಸ ಯೋಜನೆ), ಸ್ವಾವಲಂಬಿ ಸಾರಥಿ ಹಾಗೂ ಗಂಗಾ ಕಲ್ಯಾಣ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು https://sevasindhu.karnataka.gov.in ಪೋರ್ಟಲ್ ಮೂಲಕ ಗ್ರಾಮ ಒನ್/ ಕರ್ನಾಟಕ ಒನ್/ ತುಮಕೂರು ಒನ್/ ಬೆಂಗಳೂರು ಒನ್ ಸೇವಾ ಕೇಂದ್ರದಲ್ಲಿ ಸೆಪ್ಟೆಂಬರ್ 27ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿದಾರರು 2024–25 ಮತ್ತು 2025–26ನೇ ಸಾಲುಗಳಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವವರು ಮತ್ತೊಮ್ಮೆ ಮರು ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ www.kmmd.karnataka.gov.in ಅಥವಾ ದೂ.ಸಂ: 080–22374832/ 8050770004–5 ಅಥವಾ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ 0816–2005008ನ್ನು ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಸಾಲ ಸೌಲಭ್ಯ : ಬೆಸ್ತ ಜನಾಂಗದವರಿಂದ ಅರ್ಜಿ ಆಹ್ವಾನ

ತುಮಕೂರು ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮವು ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ನೀಡಲು ಬೆಸ್ತ ಜನಾಂಗದವರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಫಲಾಪೇಕ್ಷಿಗಳು ಸಾಲ ಸೌಲಭ್ಯಕ್ಕಾಗಿ ಅರಿವು–ಶೈಕ್ಷಣಿಕ(Fresh Students) ಹಾಗೂ ಅರಿವು–ಶೈಕ್ಷಣಿಕ/ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗ ಯೋಜನೆ(ನವೀಕರಣ) ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು https://sevasindhu.karnataka.gov.in ಪೋರ್ಟಲ್ ಮೂಲಕ ಗ್ರಾಮ ಒನ್/ ಕರ್ನಾಟಕ ಒನ್/ ತುಮಕೂರು ಒನ್/ ಬೆಂಗಳೂರು ಒನ್ ಸೇವಾ ಕೇಂದ್ರದಲ್ಲಿ ಸೆಪ್ಟೆಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ https://ambigaradevelopment.karnataka.gov.in ಅಥವಾ ದೂ.ಸಂ: 080–22864099 ಅಥವಾ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ 0816–2005008ನ್ನು ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಬೇಡ್ಕರ್ ಬಗ್ಗೆ ಅವಹೇಳನ: ವೇದಮೂರ್ತಿ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ



ಗುಬ್ಬಿ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಬುದ್ಧ ಹಾಗೂ ಬಸವಣ್ಣ ಅವರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಹೇಳಿಕೆ ನೀಡಲಾಗಿದೆ ಎಂದು ಆರೋಪಿಸಿ, ವೇದಮೂರ್ತಿ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ತಾಲ್ಲೂಕು ದಲಿತ ಸಂಘರ್ಷ ಸಮಿತಿ (ದಸಂಸ) ಕಾರ್ಯಕರ್ತರು ಗುಬ್ಬಿ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ತಮಟೆ ವಾದ್ಯದೊಂದಿಗೆ ಪ್ರತಿಭಟನಾ ಮೆರವಣಿಗೆ ಆರಂಭಿಸಿದ ಕಾರ್ಯಕರ್ತರು ತಾಲ್ಲೂಕು ಕಚೇರಿ ಆವರಣದವರೆಗೆ ಮೆರವಣಿಗೆ ನಡೆಸಿದರು. ಬಳಿಕ ಕಚೇರಿ ಎದುರು ಪ್ರತಿಭಟನಾ ಸಭೆ ನಡೆಸಿ, ವೇದಮೂರ್ತಿ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಂವಿಧಾನವು ಜಾತಿ, ಧರ್ಮದ ಭೇದವಿಲ್ಲದೆ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕು ಹಾಗೂ ಸಾಮಾಜಿಕ ನ್ಯಾಯವನ್ನು ಕಲ್ಪಿಸಿದೆ. ವಿಶ್ವವೇ ಗೌರವಿಸುವ ಸಂವಿಧಾನದ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವುದು ಖಂಡನೀಯ. ಇಂತಹ ಕೃತ್ಯಗಳಿಗೆ ಕಡಿವಾಣ ಹಾಕಲು ಆರೋಪಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಜಿಪಂ ಮಾಜಿ ಸದಸ್ಯ ಜಿ.ಎಚ್.ಜಗನ್ನಾಥ್ ಮಾತನಾಡಿ, ದಲಿತರನ್ನು ಶೋಷಿಸುವ ಮನೋಭಾವ ಇನ್ನೂ ಸಮಾಜದಲ್ಲಿ ಜೀವಂತವಾಗಿರುವುದಕ್ಕೆ ಈ ಘಟನೆ ನಿದರ್ಶನವಾಗಿದೆ. ಸಂವಿಧಾನದ ಮೂಲಕ ಎಲ್ಲ ವರ್ಗಗಳಿಗೂ ಸಾಮಾಜಿಕ ನ್ಯಾಯ ಹಾಗೂ ಮೀಸಲಾತಿಯಂತಹ ಹಕ್ಕುಗಳನ್ನು ಕಲ್ಪಿಸಲಾಗಿದೆ. ಆದರೆ ದಲಿತರ ಮೀಸಲಾತಿ ಹಾಗೂ ಹಕ್ಕುಗಳ ಕುರಿತು ಮಾತ್ರ ಅವಹೇಳನಕಾರಿ ಹೇಳಿಕೆ ನೀಡುವುದು ಖಂಡನೀಯ. ಬುದ್ಧ, ಬಸವಣ್ಣ ಹಾಗೂ ಅಂಬೇಡ್ಕರ್ ಅವರಂತಹ ಮಹನೀಯರ ಬಗ್ಗೆ ಹಗುರವಾಗಿ ಮಾತನಾಡಿರುವ ವ್ಯಕ್ತಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ದಸಂಸ ತಾಲ್ಲೂಕು ಸಂಚಾಲಕ ಎನ್.ಎ.ನಾಗರಾಜು ಮಾತನಾಡಿ, ಇಡೀ ವಿಶ್ವವೇ ಗೌರವಿಸುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಕುರಿತು ಅಸಂಬದ್ಧ ಹಾಗೂ ಅವಹೇಳನಕಾರಿ ಹೇಳಿಕೆ ನೀಡಿರುವುದು ದಲಿತ ಸಮುದಾಯದ ಭಾವನೆಗಳಿಗೆ ಧಕ್ಕೆ ತಂದಿದೆ. ಜಾತಿ ನಿಂದನೆ ಹಾಗೂ ಸಮಾಜದಲ್ಲಿ ಅಶಾಂತಿ ಉಂಟುಮಾಡುವಂತಹ ಹೇಳಿಕೆಗಳ ಹಿನ್ನೆಲೆಯಲ್ಲಿ ಆರೋಪಿಯ ವಿರುದ್ಧ ಸೂಕ್ತ ಪ್ರಕರಣ ದಾಖಲಿಸಿ, ಕಾನೂನು ಕ್ರಮ ಜರುಗಿಸಬೇಕು. ವೇದಮೂರ್ತಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ದಸಂಸ ವತಿಯಿಂದ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು. ನಂತರ ಪ್ರತಿಭಟನಾಕಾರರು ತಹಶೀಲ್ದಾರ್ ಆರತಿ.ಬಿ. ಅವರಿಗೆ ಮನವಿ ಪತ್ರ ಸಲ್ಲಿಸಿ, ಕೆ.ಆರ್.ಪೇಟೆ ನಿವಾಸಿ ವೇದಮೂರ್ತಿ ವಿರುದ್ಧ ಸೂಕ್ತ ತನಿಖೆ ನಡೆಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಪಪಂ ಮಾಜಿ ಸದಸ್ಯರಾದ ಮಹಮದ್ ಸಾದಿಕ್, ರೇಣುಕಸ್ವಾಮಿ, ಕಾಂಗ್ರೆಸ್ ಮುಖಂಡರಾದ ಜಿ.ಸಿ.ಶಿವಕುಮಾರ್, ರಾಘವೇಂದ್ರ, ದಸಂಸ ಜಿಲ್ಲಾ ಸಂಘಟನಾ ಸಂಚಾಲಕ ಹರಿವೆಸಂದ್ರ ಕೃಷ್ಣಪ್ಪ, ಸಂಚಾಲಕರಾದ ನರೇಂದ್ರಕುಮಾರ್, ನಿಟ್ಟೂರು ಕೃಷ್ಣಮೂರ್ತಿ, ಮಂಜುನಾಥ್, ಯೋಗೀಶ್, ತಾಲ್ಲೂಕು ಖಜಾಂಚಿ ಗುಬ್ಬಿ ಬಸವರಾಜು, ನಾಗಭೂಷಣ್, ಮಾರಶೆಟ್ಟಿಹಳ್ಳಿ ಬಸವರಾಜು, ಛಲವಾದಿ ಮಹಾಸಭಾದ ಕಿಟ್ಟದಕುಪ್ಪೆ ನಾಗರಾಜು, ಪಾಂಡುರಂಗಯ್ಯ, ಇರಕಸಂದ್ರ ನರಸಿಂಹಮೂರ್ತಿ, ಮಧು, ಇಮ್ರಾನ್, ದೊಡ್ಡಯ್ಯ, ಮನೋಹರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಾರ್ವಜನಿಕ ಆಸ್ಪತ್ರೆಯಲ್ಲಿ ಅವ್ಯವಸ್ಥೆಯ ಪರಮಾವಧಿ



ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಆಸ್ಪತ್ರೆಯ ಆವರಣದಲ್ಲಿ ಆಂಬುಲೆನ್ಸ್‌ಗಳು ಓಡಾಡಲು ಕೂಡ ದಾರಿ ಇಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದಕ್ಕೆ ಕಾರಣ, ಅಡ್ಡಾದಿಡ್ಡಿ ನಿಲ್ಲಿಸಿರುವ ದ್ವಿಚಕ್ರ ವಾಹನಗಳು.

ತುರ್ತು ಪರಿಸ್ಥಿತಿಯಲ್ಲಿ ರೋಗಿಯನ್ನು ಕರೆತರಲು ಅಥವಾ ಬೇರೆ ಆಸ್ಪತ್ರೆಗೆ ಸಾಗಿಸಲು ಆಂಬುಲೆನ್ಸ್ ತಕ್ಷಣ ಹೊರಬರಲು ಸಾಧ್ಯವಿಲ್ಲದ ಸ್ಥಿತಿ ಇದೆ.

ಅತ್ಯಂತ ಗಂಭೀರ ವಿಷಯವೆಂದರೆ, ಇಡೀ ಆಸ್ಪತ್ರೆ ಆವರಣದಲ್ಲಿ ಒಬ್ಬೇ ಒಬ್ಬ ಭದ್ರತಾ ಸಿಬ್ಬಂದಿ (ಸೆಕ್ಯುರಿಟಿ) ಕೂಡ ಕರ್ತವ್ಯದಲ್ಲಿ ಇಲ್ಲ. ಪಾರ್ಕಿಂಗ್ ವ್ಯವಸ್ಥೆಯನ್ನು ನಿಯಂತ್ರಿಸಲು, ಆಂಬುಲೆನ್ಸ್ ದಾರಿಯನ್ನು ಸುಗಮಗೊಳಿಸಲು ಯಾರೂ ಇಲ್ಲ.

ಇದರಿಂದ ರೋಗಿಗಳ ಜೀವಕ್ಕೆ ಅಪಾಯ ಎದುರಾಗುವ ಸಾಧ್ಯತೆ ಇದೆ. ಒಂದು ನಿಮಿಷ ವಿಳಂಬವಾದರೂ ಜೀವ ಹಾನಿಯಾಗಬಹುದು ಎಂಬುದನ್ನು ಆಡಳಿತ ಮರೆತಂತೆ ಕಾಣುತ್ತಿದೆ. ಇದಕ್ಕೆ ಸಂಬಂಧಪಟ್ಟ ಆಡಳಿತ ವೈದ್ಯಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿ (ಟಿಎಚ್‌ಒ) ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಗಳು ಏನು ಮಾಡುತ್ತಿದ್ದಾರೆ? ಸಾರ್ವಜನಿಕರ ಆಸ್ಪತ್ರೆಯ ಬಗ್ಗೆ ಇಷ್ಟು ನಿರ್ಲಕ್ಷ್ಯ ಏಕೆ? ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಅಮ್ ಆದ್ಮಿ ಪಕ್ಷದ ತಾ. ಅಧ್ಯಕ್ಷರ ಮೇಲೆ ಶಾಸಕರ ರೋಷಾವೇಷ



ಜಾಗವನ್ನು ತೆರವು ಮಾಡಬೇಕು ಎಂಬುದು ಅಮ್ ಆದ್ಮಿ ಪಕ್ಷದ ಒತ್ತಾಯವಾಗಿದೆ ಎಂದರು. ಮನವಿ ನೀಡಲು ಹೋದ ಅಮ್ ಆದ್ಮಿ ಪಕ್ಷದ ತಾಲೂಕು ಅಧ್ಯಕ್ಷರ ಮೇಲೆ ಶಾಸಕರು ಅಷ್ಟೊಂದು ರೋಷಾವೇಷ ತಾಳಲು ಪ್ರಮುಖ ಕಾರಣ, ಶಾಸಕರು ಮತ್ತು ಅವರ ಪತ್ನಿಯವರು ನಡೆಸಿರುವ ಅಕ್ರಮ ಕಲ್ಲು ಗಣಿಗಾರಿಕೆ. ಸರಕಾರದಿಂದ ಕಲ್ಲು ಗಣಿಗಾರಿಕೆಗೆ 5 ಎಕರೆ ಜಾಗ ಮಂಜೂರಾಗಿದ್ದರೆ, ಹೆಚ್ಚುವರಿ 5.5 ಎಕರೆ ಜಾಗದಲ್ಲಿ ಅಕ್ರಮ ಗಣಿಗಾರಿಕೆ ನಡೆಸಿರುವುದಕ್ಕೆ 11 ಕೋಟಿ ರೂಗಳ ದಂಡ ಕಟ್ಟುವಂತೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೋಟಿಸ್ ನೀಡಿದ್ದು, ಇದಕ್ಕೆ ಎಎಪಿ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಾಂಜೀನಪ್ಪ ಅವರು ಲೋಕಾಯುಕ್ತಕ್ಕೆ ನೀಡಿದ ದೂರೇ ಕಾರಣ. ಇದರಿಂದ ನಮ್ಮ ಮೇಲೆ ವಯುಕ್ತಿಕ ದ್ವೇಷ ಸಾಧಿಸುತ್ತಾ ಎಎಪಿ ಪಕ್ಷದ ಕಾರ್ಯಕರ್ತರು, ಪದಾಧಿಕಾರಿಗಳನ್ನು ಸಾರ್ವಜನಿಕವಾಗಿ ಅವಮಾನಿಸುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಎಎಪಿ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಮಾಂಜೀನಪ್ಪ, ತಿಪ್ಪೇಸ್ವಾಮಿ, ಕೆ.ಎಂ.ನಾಗರಾಜು ಉಪಸ್ಥಿತರಿದ್ದರು

ವಿದ್ಯಾರ್ಥಿಗಳು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಮೂಢನಂಬಿಕೆಗಳನ್ನು ಅನುಸರಿಸಬಾರದು

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ವಿದ್ಯಾರ್ಥಿಗಳು ತಮ್ಮ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಮೂಢನಂಬಿಕೆಗಳನ್ನು ಅನುಸರಿಸದೇ ಅಂಬೇಡ್ಕರ್, ಬಸವಣ್ಣ, ಬುದ್ಧನಂತಹ ಮಹನೀಯರ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರ್ನಾಟಕ ಲಲಿತಕಲಾ ಅಕಾಡೆಮಿ ಸದಸ್ಯ ಮನು ಚಕ್ರವರ್ತಿ ಕರೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬೆಳ್ಳಾವಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಶನಿವಾರ ಬೆಳ್ಳಾವಿ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತರತ್ನ ಡಾ: ಬಿ.ಆರ್. ಅಂಬೇಡ್ಕರ್ ಓದು ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು ದೈನಂದಿನ ಜೀವನದಲ್ಲಿ ಕಂಡು ಬರುವ ವರ್ಣಬೇಧ, ಜಾತಿಬೇಧ, ಬಡವ ಬಲ್ಲಿದನೆಂಬ ತಾರತಮ್ಯಗಳನ್ನು ಮೆಟ್ಟಿನಿಂತು ವಿಚಾರಶೀಲರಾಗಿ ಬೆಳೆದು ಸಮಾಜಕ್ಕೆ ದೊಡ್ಡ ಆಸ್ತಿಯಾಗಬೇಕೆಂದು ಕರೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು. ಮಿರ್ಜಿ ಮಾತನಾಡುತ್ತಾ ಡಾ: ಬಿ.ಆರ್.ಅಂಬೇಡ್ಕರ್ ಅವರ ದೂರದೃಷ್ಟಿ ಹಾಗೂ ಚಿಂತನೆಗಳು ಸದಾಕಾಲ ಮನುಕುಲದ ಏಳಿಗೆಗೆ ಅತ್ಯಾವಶ್ಯಕವಾಗಿದೆ. ಇವರ ಚಿಂತನೆಗಳು ಮತ್ತು ದೂರದೃಷ್ಟಿಯ ಮಾರ್ಗಗಳು ಇಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಹೆಚ್ಚು ಪ್ರಸ್ತುತವಾಗುತ್ತಿದೆ. ಪ್ರಬುದ್ಧರಾಗಿ ಬೆಳೆಯುತ್ತಿರುವ ವಿದ್ಯಾರ್ಥಿಗಳು ವಿಚಾರವಂತರಾಗಬೇಕು. ಕೆಟ್ಟದ್ದನ್ನು ಪ್ರಶ್ನಿಸುವ ಹಾಗೂ ಖಂಡಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಫತೇ ಅಹಮದ್ ಎಂ. ಮಾತನಾಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಈ ಕಾರ್ಯಕ್ರಮದ ಮೂಲಕ ಡಾ: ಬಿ.ಆರ್ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸುವುದರೊಂದಿಗೆ ಅಸ್ಪೃಶ್ಯ ಆಚರಣೆಗಳು, ಸಮಾಜದಲ್ಲಿರುವ ಮೇಲು–ಕೀಳೆಂಬ ತಾರತಮ್ಯವನ್ನು ಹೊಡೆದೋಡಿಸುವ ಮನೋಭಾವದ ಬೀಜ ಬಿತ್ತುವ ಕೆಲಸ ಮಾಡುತ್ತಿರುವುದು ಶ್ಲಾಘನೀಯವೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ 5 ವಿದ್ಯಾರ್ಥಿಗಳಿಗೆ ಪುಸ್ತಕ ರೂಪದಲ್ಲಿ ಬಹುಮಾನ ನೀಡಲಾಯಿತು.

ಕಾಲ ಹೃದಯ ಸುರಕ್ಷಿತ ತುಮಕೂರು ಎಂಬ ಸಿಪಿಆರ್ ಜಾಗೃತಿ ಅಭಿಯಾನ

ಸೂರ್ಯಪ್ರಗತಿನ್ಯೂಸ್.ಕಾಂ



ಹಂತ ಹಂತವಾಗಿ ತರಬೇತಿ ನೀಡಿ 'ಸರ್ಟಿಫೈಡ್ ಸಿಪಿಆರ್ ಟ್ರೈನರ್ಸ್' ಮಾಡುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಗೋಲ್ಡನ್ ಅವರ್ ಅನ್ನು ಪ್ರಾಣ ರಕ್ಷಣೆಗೆ ಅತ್ಯಂತ ಕಠಿಣ ಹಾಗೂ ಪ್ರಮುಖ ಸಮಯವಾಗಿದ್ದು, ಸ್ಥಳೀಯರ ತಕ್ಷಣದ ಸ್ಪಂದನೆಗೆ ಸಿಪಿಆರ್ ತರಬೇತಿ ನೆರವಾಗುತ್ತದೆ. ಈ ತರಬೇತಿಯು ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ನಡೆಯಲಿದ್ದು, ಅಕ್ಟೋಬರ್ 2 ರಂದು ಆಚರಿಸಲಾಗುವ 'ವಿಶ್ವ ಹೃದಯ ದಿನ'ದಂದು ಸಿಪಿಆರ್ ತರಬೇತಿ ಪಡೆದರೆಲ್ಲರೂ ತುಮಕೂರಿನ ಟೌನ್ ಹಾಲ್ ವೃತ್ತದಲ್ಲಿ ಸಮಾವೇಶಗೊಳ್ಳುವ ಮೂಲಕ ಈ ಅಭಿಯಾನ್ ಸಮಾರೋಪ ನಡೆಯಲಿದೆ ಎಂದು ಅವರು ಮಾಹಿತಿಯನ್ನು ವಿವರಿಸಿದರು.

ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಕಾರ್ಡಿಯೋಥೊರಾಸಿಕ್ ಮುಖ್ಯಸ್ಥರಾದ ಡಾ. ತಮೀಮ್ ಅಹ್ಮದ್ ಅಭಿಯಾನದ ನೇತೃತ್ವ ವಹಿಸಿ ಮಾತನಾಡಿದ ಅವರು, ತುಮಕೂರು ಜಿಲ್ಲಾಡಳಿತದ ಸಹಯೋಗದಲ್ಲಿ ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಕಾರ್ಡಿಯೋಥೊರಾಸಿಕ್ ಕೇಂದ್ರ ಒಂದು ತಿಂಗಳ ಕಾಲ ಹೃದಯ ಸುರಕ್ಷಿತ ತುಮಕೂರು ಎಂಬ ಸಿಪಿಆರ್ ಜಾಗೃತಿ ಅಭಿಯಾನ ಕೈಗೊಳ್ಳುತ್ತಿದ್ದು, ಜಿಲ್ಲೆಯ ಸಾರ್ವಜನಿಕ ಸ್ಥಳಗಳು, ಶಾಲಾ, ಕಾಲೇಜುಗಳಲ್ಲಿ 5ಸಾವಿರ ಜನರಿಗೆ ಉಚಿತವಾಗಿ ಸಿಪಿಆರ್ ತರಬೇತಿ ನೀಡಲಾಗುವುದು. ಕಾಲೇಜು ವಿದ್ಯಾರ್ಥಿಗಳು ಹಾಗೂ ಯುವಜನರು (ಜೆನ್ ಜಿ) ಈ ಜೀವ ರಕ್ಷಣೆಯ ಕೌಶಲ್ಯವನ್ನು ಕಲಿಯುವುದು ಅತ್ಯಂತ ಮುಖ್ಯ ಎಂದರು.

ಅಪಘಾತ ಅಥವಾ ಯಾವುದೇ ತುರ್ತು ಸಂದರ್ಭದಲ್ಲಿ ಎದುರಾದರೂ ಕೊನೆಯಲ್ಲಿ ಜೀವ ಹೋಗುವುದು ಹೃದಯ ಸ್ತಂಭನದಿಂದ. ಹಠಾತ್ ಹೃದಯಾಘಾತವಾದಾಗ ಹೃದಯ ಸಂಪೂರ್ಣವಾಗಿ ಬ್ಲಾಕ್ ಆಗಿ ಹಾನಿಗೊಳಗಾಗುತ್ತದೆ. ಆಸ್ಪತ್ರೆಗೆ ತಲುಪುವ ಮುನ್ನ ಸಿಪಿಆರ್ ಪ್ರಮುಖ ತುರ್ತು ಸಮಯದಲ್ಲಿ ಆಸ್ಪತ್ರೆ ತಲುಪಲು ಸಮಯ ಬೇಕಾಗಬಹುದು. ಆದರೆ ತಕ್ಷಣವೇ ನೀಡುವ ಸಿಪಿಆರ್ ಪ್ರಕ್ರಿಯೆಯು ವ್ಯಕ್ತಿಯ ಜೀವ ಉಳಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಅವರು ತಿಳಿಸಿದರು.

ಅಭಿಯಾನಕ್ಕೆ ಚಾಲನೆ ನೀಡಿದ ನಂತರ ಡಮ್ಮಿ (Mannequin) ಮಾದರಿಯನ್ನು ಬಳಸಿ ಎದೆಯ ಭಾಗದಲ್ಲಿ ಸರಿಯಾದ ರೀತಿಯಲ್ಲಿ ಪ್ರೆಶರ್ ನೀಡಿ ಜೀವರಕ್ಷಣೆ ಮಾಡುವ ಸಿಪಿಆರ್ ವಿಧಾನವನ್ನು ಪ್ರದರ್ಶಿಸುವ ಮೂಲಕ ಬೃಹತ್ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಎಸ್‌ಪಿ ಅಶೋಕ್, ಸಿಇಒ ಅಶ್ವಿಜಾ, ಸಾಹೇ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಡಾ. ಕೆ.ಬಿ ಲಿಂಗೇಗೌಡ, ಸಾಹೇ ವಿವಿಯ ಕುಲಾಧಿಪತಿಗಳ ಸಲಹೆಗಾರರಾದ ಡಾ.ವಿವೇಕ್ ವೀರಯ್ಯ, ಪ್ರಾಂಶುಪಾಲರಾದ ಡಾ. ಸಾಣಿಕೊಪ್ಪ, ಉಪ ಪಾಂಶುಪಾಲರಾದ ಡಾ, ಪಭಾಕರ್, ಶೀ ಸಿದ್ಧಾರ್ಥ ದಂತ ವೈದ್ಯಕೀಯ ಆಸ್ಪತೆಯ ಪಾಂಶುಪಾಲರಾದ ಡಾ.ಪವೀಣ್ ಡಿ.ಕುಡುವ, ಅಧೀಕ್ಷಕರಾದ ಡಾ.ವೆಂಕಟೇಶ್ ತುಮಕೂರು ರೋಟರಿ ಸಂಸ್ಥೆಯ ಅಧ್ಯಕ್ಷರಾದ ಶಿವಕುಮಾರ್ ಉಪಸ್ಥಿತರಿದ್ದರು.

ದೈವಿಕ ಕಾರ್ಯಗಳಿಂದ ಮನಸ್ಸಿಗೆ ನೆಮ್ಮದಿ

ಸೂರ್ಯಪ್ರಗತಿನ್ಯೂಸ್.ಕಾಂ



ಮಧುಗಿರಿ: ದೈವಾರಾಧನೆಗಳು ನಿತ್ಯಾರಾಧನೆಯಾಗಲಿ. ದೈವಿಕ ಕಾರ್ಯಗಳಿಂದ ಮನಸ್ಸಿಗೆ ನೆಮ್ಮದಿ ದೊರೆಯುತ್ತದೆ ಎಂದು ಎಲೆರಾಂಪುರ ಕುಂಚಿಟಿಗ ಮಠದ ಪೀಠಾಧ್ಯಕ್ಷರಾದ ಶ್ರೀ ಹನುಮಂತನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲ್ಲೂಕಿನ ದೊಡ್ಡೇರಿ ಹೋಬಳಿ ಕೆ.ಬಸವನಹಳ್ಳಿ ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿ ನೂತನ ದೇವಾಲಯ ಉದ್ಘಾಟನೆ ಹಾಗೂ ಕಳಶ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಪುರಾತನ ದೇವಾಲಯನ್ನು ಗ್ರಾಮಸ್ಥರು ಹಾಗೂ ದಾನಿಗಳ ಸಹಕಾರದಿಂದ ಸುಂದರ ಶಿಲಾಮಯ ದೇಗುಲ ಮೂಡಿಬಂದಿದೆ. ಗ್ರಾಮಗಳಲ್ಲಿ ಧಾರ್ಮಿಕ ಕೇಂದ್ರಗಳು ಒಗ್ಗಟ್ಟು ಮೂಡಿಸುತ್ತವೆ. ಮನೆಗಳಲ್ಲಿ ಮಕ್ಕಳಿಗೆ ಸಂಸ್ಕಾರವನ್ನು ಕಲಿಸಬೇಕು. ಮನೆ ಕಟ್ಟುವುದು ಸುಲಭ ಆದರೆ ನೆಮ್ಮದಿಯ ವಾತಾವರಣ ಕಲ್ಪಿಸುವ ಮನಸ್ಸುಗಳನ್ನು ಕಟ್ಟಬೇಕು. ವಯಸ್ಸಾದ ತಂದೆ ತಾಯಿಗಳನ್ನು ವೃದ್ಧಾಶ್ರಮಗಳಿಗೆ ಬಿಡದೆ ಪೋಷಕರನ್ನು ನೋಡಿಕೊಳ್ಳಬೇಕು. ಹಳ್ಳಿಗಳಲ್ಲಿ ಎಲ್ಲರೂ ಅಣ್ಣ ತಮ್ಮಂದಿರಂತೆ ಬದುಕಬೇಕು.

ಹೆಣ್ಣನ್ನು ಗೌರವಿಸಿದರೆ ಮನೆಗಳು ನಂದಗೋಕುಲವಾಗುತ್ತವೆ ಎಂದರು. ಈ ಭಾಗದಲ್ಲಿ ಉತ್ತಮ ಮಳೆಯಾಗಿ ರೈತರ ಮೊಗದಲ್ಲಿ ನಗು ಮೂಡಲಿ. ದೇಶ ಕಾಯುವ ಯೋಧರು ಅನ್ನ ನೀಡುವ ರೈತರಿಗೆ ಗೌರವಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ರಂಗನಾಥ್ ,ಭಾರತಿ ದಂಪತಿಗಳು, ಹಾಗೂ ದೇವಸ್ಥಾನದ ಸಮಿತಿಯ ಬಸವನಹಳ್ಳಿಲೋಕೇಶ್ ರಾಜಕುಮಾರ್, ಶಾಂತಣ್ಣ, ನಾರಾಯಣಪ್ಪ, ಚಿಕ್ಕಪ್ಪಯ್ಯ, ಚಿಕ್ಕರಂಗಪ್ಪ, ತಿಮ್ಮಣ್ಣ, ಪುಟ್ಟದ್ಯಾವಣ್ಣ, ರಂಗಧಾಮಪ್ಪ, ರಂಗನಾಥ್, ಶ್ರೀರಂಗಪ್ಪ, ಊರಿನ ಗ್ರಾಮಸ್ಥರು ಹಾಜರಿದ್ದರು.

ಕಸಾಪಕ್ಕೆ ಅಂಟಿದ ಕೊಳೆಗೆ ಮುಕ್ತಿ ದೊರೆಯಬೇಕಿದೆ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ಕಳೆದ ಹತ್ತು ವರ್ಷಗಳಿಂದ ಕನ್ನಡ ಸಾಹಿತ್ಯ ಪರಿಷತ್ತಿಗೆ ಅಂಟಿಕೊಂಡಿರುವ ಭ್ರಷ್ಟಾಚಾರ ಸೇರಿದಂತೆ ಅನೇಕ ರೀತಿಯ ಕೊಳೆಯನ್ನು ತೊಳೆಯಬೇಕಿದೆ. ಸಾಹಿತ್ಯ ಪರಿಷತ್ತನ್ನು ಇಂದು ಪುನರ್ ನಿರ್ಮಾಣ ಮಾಡಬೇಕಾದಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು, ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾಗಿರುವ ಪರಿಷತ್ತಿನ ಗೌರವವನ್ನು ಉಳಿಸಬೇಕಾಗಿದೆ ಎಂದು ಕೇಂದ್ರ ಕಸಾಪ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಜಾಣಗೆರೆ ವೆಂಕಟರಾಮಯ್ಯ ತಿಳಿಸಿದರು.

ನಗರದ ತಾಲ್ಲೂಕು ಒಕ್ಕಲಿಗರ ಭವನದಲ್ಲಿ ಭಾನುವಾರ ನಡೆದ ಕೇಂದ್ರ ಕಸಾಪ ಚುನಾವಣೆಗೆ ಸಂಬಂಧಿಸಿದ ಸದಸ್ಯರ ಸಭೆ ಹಾಗೂ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಕನ್ನಡ ಸಾಹಿತ್ಯ ಪರಿಷತ್ತು ಇಂದು ಭ್ರಷ್ಟಚಾರದಿಂದ ತುಂಬಿ ಹೋಗಿದೆ. 6.5 ಕೋಟಿ ರೂಗಳ ಅವ್ಯವಹಾರ ಸೇರಿದಂತೆ ಸುಮಾರು 16 ಹಗರಣಗಳು ಇಂದು ಸರ್ಕಾರ ಮತ್ತು ನ್ಯಾಯಾಲಯದ ಮುಂದಿವೆ. ಅಧಿಕಾರಷಾಹಿ ಮನೋಭಾವದವರಿಂದ ಕಸಾಪ ಇಂದು ಜಿಡ್ಡು ಹಿಡಿದಿದ್ದು, ಇದಕ್ಕೆ ಮುಕ್ತಿ ನೀಡಬೇಕಿದೆ ಎಂದರು. ತಮಗೆ ಇಷ್ಟ ಬಂದಂತೆ ಬೈಲಾ ತಿದ್ದುಪಡಿ ಮಾಡಿಕೊಳ್ಳಲು ಮುಂದಾದಾಗ ಯಾವುದೇ ಮೂಲ ಸೌಕರ್ಯಗಳು ಇಲ್ಲದ ಸ್ಥಳಗಳಲ್ಲಿ ಆಯೋಜಿಸಿದ್ದ ಸಭೆಗಳನ್ನು ಹೋರಾಟದ ಮೂಲಕ ತಡೆದಿದ್ದೇವೆ. ಇಷ್ಟೆಲ್ಲಾ ರದ್ದಾಂತದ ಬಳಿಕ ಇದೀಗ ಚುನಾವಣೆ ನಡೆಯುತ್ತಿದ್ದು ಪರಿಷತ್ತಿಗೆ ಹೊಸ ರೂಪ ನೀಡಲು ಎಲ್ಲರ ಸಹಕಾರ ಬೇಕಿದೆ. ಕನ್ನಡ ಸಾಹಿತ್ಯ ಪರಿಷತ್ ಇಂದು ಅತ್ಯಂತ ಸಂಕಷ್ಟ ಪರಿಸ್ಥಿತಿಯಲ್ಲಿದ್ದು ಅದಕ್ಕೆ ಮತ್ತೆ ಜೀವ ತುಂಬುವ ಕೆಲಸ ಆಗಬೇಕಾಗಿದೆ. ಹೀಗಾಗಿ ಪರಿಷತ್ತಿಗೆ ಹೊಸ ರೂಪ ನೀಡಲು ತಮಗೆ ಅವಕಾಶ ನೀಡುವಂತೆ ಮನವಿ ಮಾಡಿದರು.

ತಮ್ಮನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಿದಲ್ಲಿ ದಶಕಗಳ ಹಿಂದೆ ನಿಂತು ಹೋಗಿರುವ ಕನ್ನಡ–ಕನ್ನಡ ನಿಘಂಟು ಯೋಜನೆಯನ್ನು ಮುಂದುವರೆಸುವುದು, ಜಿಲ್ಲಾಮಟ್ಟದಲ್ಲಿ ಪುಸ್ತಕ ಸಂತೆಗೆ ಮರುಜೀವ, ನೆಲ, ಜಲ, ಭಾಷೆಯ ಉಳಿವಿಗಾಗಿ ಪರಿಷತ್ತಿನಿಂದ ಹೋರಾಟ ರೂಪಿಸುವುದು ಸೇರಿದಂತೆ ಹಲವು ಆಶಯಗಳನ್ನು ಮುಂದಿಟ್ಟುಕೊಂಡು ಚುನಾವಣೆಯಲ್ಲಿ ಸ್ಪರ್ಧೆ ನಡೆಸುತ್ತಿರುವುದಾಗಿ ತಿಳಿಸಿದರು.ಸಾಹಿತಿ ಡಾ. ಬಂಜಗೆರೆ ಜಯಪ್ರಕಾಶ್ ಮಾತನಾಡಿ ಕಸಾಪ ಚುನಾವಣೆ ಇಂದು ಬದಲಾದ ಸ್ವರೂಪ ಪಡೆದುಕೊಂಡಿದೆ. ಇಂತಹ ಸಂದಿಗ್ದ ಪರಿಸ್ಥಿತಿಯಲ್ಲಿ ಸರಿಯಾದ ಕಾರ್ಯಸೂಚಿಯನ್ನು ಮುಂದಿಟ್ಟುಕೊಂಡು ಕಸಾಪ ಸದಸ್ಯರನ್ನು ತಲುಪಬೇಕಾಗಿದೆ. ಜಾಣಗೆರೆ ವೆಂಕಟರಾಮಯ್ಯ ಅವರಿಗೆ ತಮ್ಮದೆ ಆದ ವರ್ಚಸ್ಸು ಇದ್ದು ಇದನ್ನು ಮತಗಳಾಗಿ ಪರಿವರ್ತಿಸುವ ಕಡೆಗೆ ಗಮನನೀಡಬೇಕು ಎಂದು ಹೇಳಿದರು.

ಕನ್ನಡಪರ ಹೋರಾಟಗಾರ ಸಿ.ಕೆ. ರಾಮೇಗೌಡ ಮಾತನಾಡಿ ಜಾತ್ಯಾತೀತ, ಪಕ್ಷಾತೀತವಾಗಿ ಕೆಲಸ ಮಾಡಬೇಕಾದ ಕಸಾಪದಲ್ಲಿ ಇಂದು ಜಾತಿ, ಪಕ್ಷದ ನೆಲೆ ಗಟ್ಟಿಯಾಗುತ್ತಿರುವುದು ಉತ್ತಮ ಬೆಳವಣಿಗೆಯಲ್ಲ. ಇಂತಹ ಸಂದರ್ಭದಲ್ಲಿ ಹೋರಾಟಗಾರ ಹಾಗೂ ಪತ್ರಕರ್ತ ಜಾಣಗೆರೆ ವೆಂಕಟರಾಮಯ್ಯ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡುವ ಮೂಲಕ ಪರಿಷತ್ತಿಗೆ ಹೊಸರೂಪ ನೀಡಬೇಕಾಗಿದೆ ಎಂದರು.ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್.ಜಿ. ಸಿದ್ಧರಾಮಯ್ಯ ಮಾತನಾಡಿ ಪರಿಷತ್ತು ಇಂದು ಭ್ರಷ್ಟಾಚಾರದಿಂದ ತುಂಬಿ ತುಳುಕುತ್ತಿದೆ. ರಾಜಕೀಯ ಪಕ್ಷಗಳ ರೀತಿಯಲ್ಲಿ ಇಂದು ಕಸಾಪ ಚುನಾವಣೆಗಳು ನಡೆಯುತ್ತಿರುವುದು ಆತಂಕ ಸೃಷ್ಟಿಸಿದೆ. ಇಂತಹ ಸನ್ನಿವೇಶದಲ್ಲಿ ಪಾರದರ್ಶಕ ವ್ಯಕ್ತಿತ್ವದ ಜಾಣಗೆರೆ ವೆಂಕಟರಾಮಯ್ಯ ಅವರು ಸೂಕ್ತ ವ್ಯಕ್ತಿ. ಕಸಾಪದಲ್ಲಿ ಕಳೆದ ಹತ್ತು ವರ್ಷಗಳಿಂದ ಸರ್ವಾಧಿಕಾರಿ ಧೋರಣೆ ಹೆಚ್ಚಾಗುತ್ತಿದೆ. ಪರಿಷತ್ತಿನ ಕಾರ್ಯವೈಖರಿ ಪ್ರಶ್ನೆ ಮಾಡುವವರ ಹೆಸರನ್ನೆ ಸದಸ್ಯತ್ವದ ಪಟ್ಟಿಯಿಂದ ಕೈಬಿಡಲಾಗಿದೆ. ಪರಿಷತ್ತಿನ ಉಳಿವಿಗೆ ಇಂದು ಪಣತೊಡದಿದ್ದರೆ ಮುಂದಿನ ಕೆಲವೇ ವರ್ಷಗಳಲ್ಲಿ ಪರಿಷತ್ತು ನಿರ್ನಾಮವಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ರಾಮನಗರದ ಪ್ರೊಫೆಸರ್ ವಿ.ಎಚ್. ರಾಜಶೇಖರ್ ಮಾತನಾಡಿ ಇಂದು ಗ್ರಾಮೀಣ ಭಾಗದಲ್ಲಿ ಸರ್ಕಾರಿ ಶಾಲೆಗಳು ಮಕ್ಕಳಿಲ್ಲದೆ ಮುಚ್ಚಿ ಹೋಗುತ್ತಿವೆ. ಇಂತಹ ಸಂದರ್ಭದಲ್ಲಿ ಕನ್ನಡ ನೆಲ, ಜಲ, ಭಾಷೆಗಾಗಿ ಹೋರಾಟ ನಡೆಸುವುದರ ಜೊತೆಗೆ ಕನ್ನಡ ಶಾಲೆಗಳ ಉಳಿವಿಗೂ ಸಹ ಹೋರಾಟ ನಡೆಸಬೇಕಾಗಿದೆ. ಇಡೀ ವಿಶ್ವದಲ್ಲಿ ಸುಂದರ ಲಿಪಿಯನ್ನು ಹೊಂದಿರುವ ಏಕೈಕ ಭಾಷೆಯ ಸ್ಥಾನಮಾನ ಹೊಂದಿರುವ ಕನ್ನಡ ಭಾಷೆ ನಮ್ಮದು ಎಂದು ಹೇಳಿಕೊಳ್ಳುವುದೇ ಒಂದು ಹೆಮ್ಮೆಯ ವಿಷಯ ಎಂದು ಅಭಿಪ್ರಾಯಪಟ್ಟರು.

ನಾಗಲಮಡಿಕೆಯಲ್ಲಿ ಪ್ರಜಾಸೇವಾ ಆಂದೋಲನ



ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ತಾಲ್ಲೂಕಿನ ನಾಗಲಮಡಿಕೆ ಗ್ರಾಮದಲ್ಲಿ ಶನಿವಾರ ನಡೆಯಲಿರುವ ಪ್ರಜಾಸೇವಾ ಆಂದೋಲನ ಸಭೆಯ ಸ್ಥಳವನ್ನು ತಹಶೀಲ್ದಾರ್ ವೈ. ರವಿ ಹಾಗೂ ತಾಲ್ಲೂಕು ಪಂಚಾಯಿತಿ ಇಒ ಮಧುಸೂದನ್ ಅವರು ಸೋಮವಾರ ಪರಿಶೀಲಿಸಿದರು. ನಾಗಲಮಡಿಕೆ ದೇವಸ್ಥಾನದ ಆವರಣದಲ್ಲಿ ಸಭೆ ನಡೆಸಲು ಅನುಕೂಲವಿರುವ ಸ್ಥಳವನ್ನು ಅಧಿಕಾರಿಗಳು ವೀಕ್ಷಿಸಿದರು. ಸ್ಥಳದ ಕುರಿತು ಶಾಸಕರೊಂದಿಗೆ ಚರ್ಚಿಸಿ ಅಂತಿಮವಾಗಿ ನಿರ್ಧರಿಸಲಾಗುವುದು ಎಂದು ತಿಳಿಸಿದರು.

ಬಳಿಕ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಮುಖಂಡರು ಹಾಗೂ ಸಾರ್ವಜನಿಕರಿಂದ ಸಭೆ ಆಯೋಜಿಸುವ ಕುರಿತು ಸಲಹೆ, ಅಭಿಪ್ರಾಯಗಳನ್ನು ಪಡೆಯಲಾಯಿತು.

ತಹಶೀಲ್ದಾರ್ ವೈ. ರವಿ ಮಾತನಾಡಿ, ಮುಖ್ಯಮಂತ್ರಿ ಹಾಗೂ ಸರ್ಕಾರದ ನಿರ್ದೇಶನದಂತೆ ಪ್ರಜಾಸೇವಾ ಆಂದೋಲನ ಸಭೆಯನ್ನು ಆಯೋಜಿಸಲಾಗುತ್ತಿದೆ. ಸಾರ್ವಜನಿಕರು ತಮ್ಮ ಕುಂದುಕೊರತೆಗಳು ಹಾಗೂ ಗ್ರಾಮದ ವಿವಿಧ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತರಬಹುದು ಎಂದರು.

ಸರ್ಕಾರದ ವತಿಯಿಂದ ಅಹವಾಲು ಸಲ್ಲಿಸಲು ವಿಶೇಷ ಅರ್ಜಿ ನಮೂನೆಯನ್ನು ಸಿದ್ಧಪಡಿಸಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಈ ನಮೂನೆಯಲ್ಲಿ ದಾಖಲಿಸಿ ಸಲ್ಲಿಸಬೇಕು. ಸ್ವೀಕರಿಸಿದ ಅರ್ಜಿಗಳನ್ನು ಶಾಸಕರ ಮೂಲಕ ಸಂಬಂಧಪಟ್ಟ ಇಲಾಖೆಗೆ ನೀಡಿ ಪರಿಶೀಲಿಸಿ ಸೂಕ್ತ ಪರಿಹಾರ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ನಾಗಲಮಡಿಕೆ ಹೋಬಳಿ ಉಪ ತಹಶೀಲ್ದಾರ್ ಚಿಕ್ಕರಾಜು, ಕಂದಾಯ ತನಿಕಾ ಅಧಿಕಾರಿ ಕೆ ಸಿ ನಾರಾಯಣ ಗೌಡ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಣಮಂತರಾಯಪ್ಪ, ಹೋಬಳಿಯ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು, ಕಂದಾಯ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.ರಕ್ತನಿಧಿಯ ರಂಜಿತ್ ಎಂ.ಟಿ. ರಘು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಮಾದರಿ ಕ್ಷೇತ್ರವನ್ನಾಗಿ ಮಾಡುವುದೇ ನನ್ನ ಗುರಿ ; ಇಕ್ಬಾಲ್ ಹುಸೇನ್

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ರಾಮನಗರವನ್ನು ರಾಜ್ಯದಲ್ಲಿಯೇ ಮಾದರಿ ಕ್ಷೇತ್ರವನ್ನಾಗಿ ಮಾಡುವುದೇ ನಮ್ಮ ಧ್ಯೇಯವಾಗಿದ್ದು, ಸಾರಿಗೆ ಇಲಾಖೆಯ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಸರ್ಕಾರ 2.5 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಶಾಸಕ ಎಚ್.ಎ.ಇಕ್ಬಾಲ್ ಹುಸೇನ್ ತಿಳಿಸಿದರು.

ನಗರದ ಪ್ರಾದೇಶಿಕ ಸಾರಿಗೆ ಇಲಾಖೆ ಕಚೇರಿಯ ಆವರಣದಲ್ಲಿ ಸೋಮವಾರ 2.5ಕೋಟಿ ವೆಚ್ಚದ ಪಾರ್ಕ್ ಅಭಿವೃದ್ಧಿ, ಕಾಂಪೌಂಡ್ ನಿರ್ಮಾಣ ಸೇರಿದಂತೆ ಇತರ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಸಾರ್ವಜನಿಕರ ಮನೆ ಬಾಗಿಲಿಗೆ ತ್ವರಿತಗತಿಯಲ್ಲಿ ಸೇವೆಯನ್ನು ಒದಗಿಸಲು ಪ್ರಜಾ ಸೇವೆ ಇಲಾಖೆ ಸೃಷ್ಟಿಸಲಾಗಿದೆ ಎಂದು ಹೇಳಿದರು.

ಸಾರ್ವಜನಿಕರಿಗೆ ಸಾರಿಗೆ ಇಲಾಖೆ ಕಚೇರಿ ಆವರಣದಲ್ಲಿ ಮೂಲಭೂತ ಸೌಕರ್ಯ ಒದಗಿಸಲು 2.5 ಕೋಟಿ ರೂಪಾಯಿ ವೆಚ್ಚದಲ್ಲಿ ಕಟ್ಟಡ, ಕಾಂಪೌಂಡ್ ಮತ್ತು ಪಾರ್ಕ್ ನಿರ್ಮಾಣಕ್ಕೆ ಸರ್ಕಾರ ಅನುದಾನ ನೀಡಿದೆ. 2 ಕೋಟಿ ರೂಪಾಯಿ ಹಣವನ್ನ ನೀಡಲಾಗಿದ್ದು, ಈಗಾಗಲೇ ಕಟ್ಟಡವನ್ನ ನಿರ್ಮಾಣ ಮಾಡಲಾಗಿದೆ. ಪಾರ್ಕ್, ಕಾಂಪೌಂಡ್ ನಿರ್ಮಾಣ ಕೆಲಸ ಆಗಬೇಕು. ಮಹಿಳೆಯರುಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯ ನಿರ್ಮಾಣ ಮಾಡಲು ತಿಳಿಸಲಾಗಿದೆ. ಕಚೇರಿಗೆ ಆಗಮಿಸುವ ಸಾರ್ವಜನಿಕರು ಕುಳಿತುಕೊಳ್ಳಲು ನೆರಳಿನಡಿ ಆಸನಗಳ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದೇನೆ ಎಂದರು.ಸಾರಿಗೆ ಇಲಾಖೆ ಬಹಳ ಮುಖ್ಯವಾದಂತಹ ಒಂದು ಇಲಾಖೆ. ಜಿಲ್ಲೆಯಲ್ಲಿರುವ ಅನೇಕ ರೀತಿಯಲ್ಲಿ ವಾಹನಗಳು, ಚಾಲನಾ ಪರವಾನಗಿ, ಅನುಮತಿ ಪತ್ರ ಹೀಗೆ ಸಾರ್ವಜನಿಕರಿಗೆ ಸೇವೆ ಬೇಕಾಗಿದೆ. ಇಂತಹ ಸ್ಥಳದಲ್ಲಿ ಹಲವು ಮೂಲಭೂತ ಸೌಕರ್ಯ ಸಾರ್ವಜನಿಕರಿಗೆ ಸಿಗಬೇಕಿದೆ ಎಂದು ತಿಳಿಸಿದರು.

ಮಧ್ಯವರ್ತಿಗಳಿಗೆ ಕಡಿವಾಣ : ಸಾರಿಗೆ ಕಚೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿದೆ. ಮಧ್ಯವರ್ತಿಗಳಿಗೆ ಕಡಿವಾಣ ಹಾಕುವ ಜತೆಗೆ ಕಚೇರಿಗೆ ನೇರವಾಗಿ ಆಗಮಿಸಿ ಸೇವೆಗಳನ್ನು ಪಡೆದುಕೊಳ್ಳುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದ ಶಾಸಕರು ಸಾರ್ವಜನಿಕರನ್ನು ಪೀಡಿಸುವ ಮಧ್ಯವರ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸಲಹೆ ನೀಡಿದರು.

ವಾಹನಗಳ ಹರಾಜಿಗೆ ಸೂಚನೆ : ಕಚೇರಿ ಆವರಣದಲ್ಲಿರುವ ಸೀಜ್ ಮಾಡಿರುವ ವಾಹನಗಳನ್ನು ಶೀಘ್ರ ವಿಲೇವಾರಿ ಮಾಡಬೇಕು. ನಂತರ ಅಲ್ಲಿ ಬೆಳೆದಿರುವ ಗಿಡಗಂಟಿಗಳನ್ನು ತೆರವುಗೊಳಿಸಿ. ಟ್ರ್ಯಾಕ್ ನಿರ್ಮಾಣ, ಸ್ಟಾಕ್ ಯಾರ್ಡ್, ಸೀಜ್ ಮಾಡಿದ ವಾಹನಗಳನ್ನು ನಿಲ್ಲಿಸಲು ನಗರದ ಹೊರ ವಲಯದಲ್ಲಿರ ಈಗಾಗಲೇ ಆರು ಎಕರೆ ಜಮೀನು ಗುರುತಿಸಲಾಗಿದೆ. ಅದನ್ನು ಪ್ರಾದೇಶಿಕ ಸಾರಿಗೆ ಇಲಾಖೆಗೆ ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು. ಹಾಳಾಗಿರುವ ಕೆಲವು ರಸ್ತೆಗಳನ್ನು ಅಭಿವೃದ್ಧಿಪಡಿಸಲು ಇದುವರೆಗೆ ಸಾಧ್ಯವಾಗಿರಲಿಲ್ಲ. ಮೊದಲು ರಸ್ತೆ ಅಗಲೀಕರಣ ಮತ್ತು ಅಭಿವೃದ್ಧಿ ಮಾಡಬೇಕು. ರಸ್ತೆಯ ಎರಡೂ ಬದಿ ಫುಟ್‌ಪಾತ್ ವ್ಯವಸ್ಥೆ ಕಲ್ಪಿಸಬೇಕು. ಇದನ್ನು ಮಾಡದೆ ನಾವು ಕೇವಲ ಅಧಿಕಾರಿಗಳ ಮೇಲೆ ಒತ್ತಡ ಹೇರಿದರೆ ಯಾವುದೇ ಪ್ರಯೋಜನ ಆಗುವುದಿಲ್ಲ ಎಂದರು.

ಫುಟ್‌ಪಾತ್ ನಿರ್ಮಾಣಕ್ಕೆ ಕ್ರಮ : ಕೆಂಪೇಗೌಡ ಸರ್ಕಲ್‌ನಿಂದ ಐಜೂರು ಸರ್ಕಲ್‌ವರೆಗೂ ಫುಟ್‌ಪಾತ್ ನಿರ್ಮಾಣಕ್ಕೆ ವ್ಯವಸ್ಥೆ ಮಾಡಲಾಗುತ್ತಿದೆ. ರೈಲ್ವೆ ಸ್ಟೇಷನ್ ರಸ್ತೆ ಅಭಿವೃದ್ಧಿ ಪಡಿಸಲಾಗುತ್ತಿದೆ. ಕನಕಪುರ ಸರ್ಕಲ್, ಕೆಂಪೇಗೌಡ ಸರ್ಕಲ್‌ನಲ್ಲಿ ಅಭಿವೃದ್ಧಿ ಕೆಲಸ ಮಾಡಲು, ಅದನ್ನ ಸುಂದರೀಕರಣ ಕೆಲಸ ಮಾಡಲು ಕೈಗೆತ್ತಿಕೊಂಡಿದ್ದೇವೆ. ಐಜೂರು ವೃತ್ತದಲ್ಲಿರುವ ಸಿಗ್ನಲ್ ವ್ಯವಸ್ಥೆಯನ್ನು ಮತ್ತಷ್ಟು ಆಧುನೀಕರಣಗೊಳಿಸಿ, ಅಲ್ಲಿ ಅಶೋಕ ಸ್ತಂಭವನ್ನು ಸ್ಥಾಪನೆ ಮಾಡಲು 10 ಕೋಟಿ ಯೋಜನೆ ರೂಪಿಸಲಾಗುತ್ತಿದೆ

ಕಲಿಯುಗದಲ್ಲಿ ಆಧ್ಯಾತ್ಮಿಕತೆ ಜ್ಞಾನ ಅತ್ಯವಶ್ಯಕ,



ಹಲಗೂರು:ಸಮೀಪದ ದಳವಾಯಿ ಕೋಡಿಹಳ್ಳಿ ಗ್ರಾಮದಲ್ಲಿ ಶ್ರೀಮತಿ ರಂಜಿತಾ, ಕು.ತಾರುಣ್ಯ ಮತ್ತು ಮೃದುಲ ಇವರ ಸ್ಮರಣಾರ್ಥವಾಗಿ ನಿರ್ಮಿಸಿರುವ ಶ್ರೀ ರಾಧಾಕೃಷ್ಣ ಆಧ್ಯಾತ್ಮ ಮಂದಿರದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮ ಭಕ್ತಿಪೂರ್ವಕವಾಗಿ ನಡೆಯಿತು.

ಶುಕ್ರವಾರ ಬೆಳಿಗ್ಗೆ 9 ಗಂಟೆಗೆ ಅಭಿಷೇಕ, ಉಯ್ಯಾಲೆ ಸೇವೆ ಮತ್ತು ಪಲ್ಲಕ್ಕಿ ಸೇವೆ ನಡೆಯಿತು. ಮಂದಿರದ ಹಿಂಭಾಗವಿರುವ ತೆರದ ಬಾವಿಯಲ್ಲಿ ಕೃಷ್ಣನ ವಿಗ್ರಹವಿರಿಸಿ ತೆಪ್ಪೋತ್ಸವ ನಡೆಸಿದರು. ನಂತರ ಮಹಾ ಮಂಗಳಾರತಿ ನಡೆಯಿತು. ಮೈಸೂರು ಮನು, ಸಿಂಚನಾ ಮತ್ತು ತಂಡದವರಿಂದ ಭಜನಾ ಕಾರ್ಯಕ್ರಮ ನಡೆಯಿತು. ಮಧ್ಯಾಹ್ನ ಭಕ್ತಾಧಿಗಳಿಗೆ ಪ್ರಸಾದ ವಿನಿಯೋಗ ನಡೆಯಿತು. ಮೈಸೂರು ಮಾನಸ ಗಂಗೋತ್ರಿಯ ಸಂಸ್ಕೃತ ಉಪನ್ಯಾಸಕ ಉಮೇಶ್ ಕುಮಾರ್ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು..

ರಾಮಕೃಷ್ಣ ಅಧ್ಯಾತ್ಮ ಮಂದಿರ ಸಂಸ್ಥಾಪಕ ಸಿದ್ದಲಿಂಗಸ್ವಾಮಿ ಮಾತನಾಡಿ ಕಲಿಯುಗದಲ್ಲಿ ಆಧ್ಯಾತ್ಮಿಕತೆ ಜ್ಞಾನ ಅತ್ಯವಶ್ಯಕ, ಈ ಜೀವನ ಅನಿಶ್ಚಿತತೆಯ ಪಯಣ ಆಗಿದ್ದು ಜೀವನದ ಏರುಪೇರುಗಳನ್ನು ಅನುಭವಿಸಬೇಕಾದ ಅನಿವಾರ್ಯತೆ ಇದ್ದು, ಮನಸ್ಥಿತಿಯನ್ನು ಸಮತೋಲನ ಕಾಯ್ದುಕೊಳ್ಳಲು ಆಧ್ಯಾತ್ಮಿಕ ಜ್ಞಾನದ ಅವಶ್ಯಕತೆ ಬಹಳ ಇದೆ.

ಭಗವದ್ಗೀತೆ ಕೇವಲ ಧಾರ್ಮಿಕ ಗ್ರಂಥವಲ್ಲ. ಅದು ಪ್ರತಿಯೊಬ್ಬ ಮನುಷ್ಯನ ಜೀವನಕ್ಕೆ ಅವಶ್ಯವಿರುವ ಆಧ್ಯಾತ್ಮಿಕ ಜ್ಞಾನ ನೀಡುವ ಮಹಾನ್ ಗ್ರಂಥ. ಧಾರ್ಮಿಕ ಆಚರಣೆ ಭಗವದ್ಗೀತೆ ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ. ಜೀವ ಮತ್ತು ಜಗತ್ತಿನ ಸೃಷ್ಟಿಗೆ ಕಾರಣಕರ್ತನೇ ಭಗವಂತ, ಭಗವಂತನ ಸೇವೆ ಮಾಡುವುದು ನಮ್ಮ ಜೀವನದ ಪರಮ ಗುರಿಯಾಗಿದೆ. ಭಗವಂತನ ಸೇವೆಯಲ್ಲಿ ಎಲ್ಲರೂ ತೊಡಗಿಸಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಜಯಣ್ಣ, ರವೀಶ್, ದಯಾನಂದ್, ಪ್ರವೀಣ್, ಪ್ರದೀಪ್, ಸೋಮ ಸೇರಿದಂತೆ ಹಲವರು ಭಾಗವಹಿಸಿದ್ದರು.

ಧಾರ್ಮಿಕ ಸಭಾ ಕಾರ್ಯಕ್ರಮ ಸರ್ವ ಜನಾಂಗದ ಶಾಂತಿಯ ತೋಟದಂತೆ



ಬೆಳ್ಳೂರು: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ.), ತುರುವೇಕೆರೆ ಗ್ರಾಮಾಂತರ ಯೋಜನಾ ಕಚೇರಿ ಹಾಗೂ ಚುಂಚನಗಿರಿ ವಲಯದ ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಇಲ್ಲಿನ ವಿಮಲನಾಥ ಭವನದಲ್ಲಿ ಸಾಮೂಹಿಕ ಶ್ರೀ ವರಮಹಾಲಕ್ಷ್ಮಿ ಪೂಜೆ ಮತ್ತು ಧಾರ್ಮಿಕ ಸಭಾ ಕಾರ್ಯಕ್ರಮ ವಿಜೃಂಭಣೆಯಿಂದ ಜರುಗಿತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಆದಿಚುಂಚನಗಿರಿ ಶಾಖಾ ಮಠದ (ಬಿ.ಜಿ. ನಗರ) ಶ್ರೀ ಶ್ರೀ ಸತ್ಯಕೀರ್ತಿ ಸ್ವಾಮೀಜಿಯವರು, "ಧರ್ಮಸ್ಥಳ ಸಂಸ್ಥೆಯ ವತಿಯಿಂದ ಆಯೋಜಿಸಿರುವ ಈ ಪೂಜೆಯು ಸರ್ವ ಜನಾಂಗದ ಶಾಂತಿಯ ತೋಟದಂತೆ ಕಂಗೊಳಿಸುತ್ತಿದೆ. ಎಲ್ಲರನ್ನೂ ಪ್ರೀತಿಸುವುದು ಹಾಗೂ ಇತರರಿಗೆ ಒಳ್ಳೆಯದನ್ನು ಬಯಸುವುದೇ ನಿಜವಾದ ಧರ್ಮ. ಸರ್ವಧರ್ಮೀಯರು ಜೊತೆಯಾಗಿ ಪೂಜೆಯಲ್ಲಿ ಪಾಲ್ಗೊಂಡಿರುವುದು ನಾವೆಲ್ಲರೂ ಭಾರತೀಯರು ಎಂಬ ಐಕ್ಯಮತ್ಯದ ಭಾವವನ್ನು ಮೂಡಿಸಿದೆ," ಎಂದು ಹಾರೈಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತುಮಕೂರು ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ, "ಧರ್ಮಸ್ಥಳ ಯೋಜನೆಯು ಗ್ರಾಮೀಣ ಮಹಿಳೆಯರ ಸಬಲೀಕರಣ ಹಾಗೂ ಸ್ವಾವಲಂಬನೆಗೆ ಮುನ್ನುಡಿ ಬರೆದಿದೆ. ಎಸ್.ಬಿ.ಐ. ಬ್ಯಾಂಕ್ ಮೂಲಕ ಯಾವುದೇ ಸಂಕೀರ್ಣ ದಾಖಲೆಗಳಿಲ್ಲದೆ ಅಲ್ಪಾವಧಿಯಲ್ಲಿ ಸಾಲ ಸೌಲಭ್ಯ ಒದಗಿಸುತ್ತಿರುವುದು ದೇಶದಲ್ಲೇ ವಿನೂತನ ಮಾದರಿಯಾಗಿದೆ. ಸುಜ್ಞಾನ ನಿಧಿ, ಜ್ಞಾನದೀಪ ಶಿಕ್ಷಕರ ಒದಗಣೆ, ವಾತ್ಸಲ್ಯ ಮನೆ ನಿರ್ಮಾಣ, ಕೆರೆ ಪುನಶ್ಚೇತನ ಮುಂತಾದ ಸಮಾಜಮುಖಿ ಕಾರ್ಯಗಳ ಮೂಲಕ ನೊಂದವರ ಸೇವೆಯಲ್ಲಿ ಶ್ರೀ ಮಂಜುನಾಥ ಸ್ವಾಮಿಯ ಸಾನ್ನಿಧ್ಯವನ್ನು ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಕಾಣುತ್ತಿದ್ದಾರೆ," ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಸಚಿನ್ ಚಲುವರಾಯಸ್ವಾಮಿ ಮಾತನಾಡಿ, "ಧರ್ಮಸ್ಥಳ ಯೋಜನೆಯು ರಾಜ್ಯದ ಹಳ್ಳಿಗಳ ಸರ್ವಾಂಗೀಣ ಪ್ರಗತಿಗೆ ಶ್ರಮಿಸುತ್ತಿದ್ದು, ಮಹಿಳೆಯರು ಇದರ ಪ್ರಯೋಜನ ಪಡೆದು ಆರ್ಥಿಕವಾಗಿ ಇನ್ನಷ್ಟು ಪ್ರಗತಿ ಕಾಣಬೇಕು," ಎಂದರು.

ಸಹಾಯಧನ ಹಾಗೂ ಲಾಭಾಂಶ ವಿತರಣೆ:

ಸುಜ್ಞಾನ ನಿಧಿ ಶಿಷ್ಯವೇತನ: ರಾಜ್ಯಾದ್ಯಂತ ಈವರೆಗೆ 1,47,635 ವಿದ್ಯಾರ್ಥಿಗಳಿಗೆ □186 ಕೋಟಿ ಮೊತ್ತದ ಶಿಷ್ಯವೇತನ ನೀಡಲಾಗಿದ್ದು, ವೇದಿಕೆಯಲ್ಲಿ ಸಾಂಕೇತಿಕವಾಗಿ 15 ವಿದ್ಯಾರ್ಥಿಗಳಿಗೆ ಮಂಜೂರಾತಿ ಪತ್ರ ವಿತರಿಸಲಾಯಿತು.

ಸಂಘದ ಲಾಭಾಂಶ: ಸ್ವಸಹಾಯ ಸಂಘದ ವ್ಯವಹಾರದ ಲಾಭಾಂಶದ ರೂಪದಲ್ಲಿ ಅಲ್–ಅಮೀನ್ ಸಂಘಕ್ಕೆ □1 ಲಕ್ಷ ಮೊತ್ತವನ್ನು ಪೂಜ್ಯ ಸ್ವಾಮೀಜಿಯವರ ಅಮೃತಹಸ್ತದಿಂದ ಹಸ್ತಾಂತರಿಸಲಾಯಿತು.

ವೇದಿಕೆಯಲ್ಲಿ ಜೈನ ಸಮುದಾಯದ ಅಧ್ಯಕ್ಷ ಪದ್ಮನಾಭ ಜೈನ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಮೂಡ್ಲಿಗಿರಿಗೌಡ, ಜೈನ ಮಹಿಳಾ ಸಂಘದ ಕಾರ್ಯದರ್ಶಿ ಧರಣಮ್ಮ, ಜಾಮಿಯಾ ಮಸೀದಿ ಸಮಿತಿ ಅಧ್ಯಕ್ಷ ಯಾಸಿನ್, ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ವೆಂಕಟೇಶ್, ನಟಿ ಧಾಬಾ ಅಶೋಕ್, ಸಮಾಜ ಸೇವಕ ಮಂಜುನಾಥ್, ಪೂಜಾ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಚುಂಚನಗಿರಿ ವಲಯದ 1,500ಕ್ಕೂ ಅಧಿಕ ಭಕ್ತರು ಮತ್ತು ಮಹಿಳೆಯರು ಪಾಲ್ಗೊಂಡಿದ್ದರು. ಯೋಜನಾಧಿಕಾರಿ ಶೇಖರ್ ಶೆಟ್ಟಿ ಸ್ವಾಗತಿಸಿ, ವಲಯ ಮೇಲ್ವಿಚಾರಕಿ ಪ್ರೇಮ ಕಾರ್ಯಕ್ರಮ ನಿರೂಪಿಸಿದರು.ಬಿಟ್ಟು ಏಕ ವಚನದಲ್ಲಿ ಸಚಿವರ ಬಗ್ಗೆ ಮಾತನಾಡುವುದು ಸರಿಯಲ್ಲ. ಭಾಷೆಯ ಬಗ್ಗೆ ಹಿಡಿತ ಮತ್ತು ಗೌರವ ಇರಲಿ ಬಾಲಿಷವಾದ ಹೇಳಿಕೆ ನೀಡಿದರೆ ಯಾರೂ ಹೆದರುವುದಿಲ್ಲ. ಧಮ್ಮು ತಾಕತ್ತು ಸಮಯ ಬಂದಾಗ ತೋರಿಸಲಿ ಎಂದು ಸವಾಲು ಎಸೆದು ಲಘುವಾಗಿ, ಅವಹೇಳನಕಾರಿಯಾಗಿ ಮಾತನಾಡುವುದು ನಿಲ್ಲಿಸಿ ಭಾಷೆ ಮೇಲೆ ಹಿಡಿತ ವಿರಲಿ.

ರಾಜ್ಯದಲ್ಲೇ ಪ್ರಜಾಸೇವಾ ಅಭಿಯಾನ ಜನ ಸಭೆಯಾಗಿದೆ

ಚಿಕ್ಕನಾಯಕನಹಳ್ಳಿ–ಈ ಬಾರಿಯ ಚುನಾವಣೆಯ ನಂತರದಲ್ಲಿ 122ವಾರಗಳ ಜನಸ್ಪಂದನಾ ಕಾರ್ಯಕ್ರಮ, 32ವಾರಗಳ ಮನೆಬಾಗಿಲಿಗೆ ಮನೆಮಗ ಕಾರ್ಯಕ್ರಮಗಳು ಇಂದು ರಾಜ್ಯದಲ್ಲಿ 224 ಕ್ಷೇತ್ರಗಳಲ್ಲಿ ಸರ್ಕಾರವೇ ಪ್ರಜಾಸೇವಾ ಅಭಿಯಾನ ಎಂಬ ಹೆಸರಿನಿಂದ ಜನಸಭೆಯನ್ನು ನಡೆಸುತ್ತಿದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.ತಾಲ್ಲೂಕಿನ ಕಂದಿಕೆರೆಗ್ರಾಮದಲ್ಲಿ ತಾಲ್ಲೂಕು ಆಡಳಿತದವತಿಯಿಂದ ಏರ್ಪಡಿಸಲಾಗಿದ್ದ ಪ್ರಜಾಸೇವಾ ಅಭಿಯಾನ ಜನಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಮನೆಮಗ ಮನೆಬಾಗಿಲಿಗೆ ಎಂಬ ಶೀರ್ಷಿಕೆಯಡಿಯಲ್ಲಿ ನಡೆಸಲಾಗುತ್ತಿದ್ದ ಜನಸ್ಪಂದನಾ ಕಾರ್ಯಕ್ರಮ ಇಂದು ಜನರ ಬಳಿಗೆ ಸರ್ಕಾರ ಎಂದು ಮಾಡಲಾಗುತ್ತಿದೆ ಇದರಿಂದ ಜನಸಾಮಾನ್ಯರು ಲಂಚದ ಆಮೀಷವಿಲ್ಲದೇ, ಮದ್ಯವರ್ತಿಗಳ ಹಾವಳಿ ಇಲ್ಲದೇ ಶಾಸಕರನ್ನು ಅಧಿಕಾರಿಗಳನ್ನು ಹುಡುಕಿಕೊಂಡು ತಿರುಗಾಡುವುದು ತಪ್ಪುತ್ತದೆ ಇಂದು ಎಲ್ಲಾ ಇಲಾಖೆಗಳು ನಿಮ್ಮ ಬಳಿಗೆ ಬಂದಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳಿ ಎಂದ ಅವರು ನಾವು ಇದುವರೆಗೆ ಪ್ರತಿವಾರದ ಜನಸ್ಪಂದನಾ ಕಾರ್ಯಕ್ರಮದಲ್ಲಿ 3460 ಅರ್ಜಿಗಳು, ಹಾಗೂ ಗ್ರಾಮಪಂಚಾಯಿತಿಗಳಲ್ಲಿನಡೆಯುವ ಮನೆಬಾಗಿಲಿಗೆ ಮನೆಮಗ ಕಾರ್ಯಕ್ರಮದಲ್ಲಿ ಒಟ್ಟು 2878 ಅರ್ಜಿಗಳನ್ನು ಪಡೆಯಲಾಗಿದ್ದು ಅಧಿಕಾರಿಗಳು ಪಾರದರ್ಶಕವಾಗಿ ಪ್ರತಿಯೊಬ್ಬರ ಅರ್ಜಿಯನ್ನು ಜವಾಬ್ದಾರಿಯಿಂದ ತೆಗೆದುಕೊಂಡು ಕ್ರಮ ಕೈಗೊಳ್ಳಬೇಕು ಕಂದಾಯ ಇಲಾಕೆಯ ಅರ್ಜಿಗಳೇ ಹೆಚ್ಚು ಇದ್ದು ಬಗರ್‌ಹಕುಂ, ಸಾಗುವಳಿ, ಖಾತೆ ಬದಲಾವಣೆ ಅಜಿಗಳೇ ಇವೆ ಅದ್ದರಿಂದ ಜನರು ನೇರವಾಗಿ ಅಧಿಕಾರಿಗಳ ಬಳಿ ನಮ್ಮ ಬಳಿ ಬನ್ನಿ ನಿಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಿ ಇದನ್ನು ಬಳಸಿಕೊಳ್ಳಿ ಎಂದ ಅವರು ಪಿಡಿಒ ಹಾಗೂ ಗ್ರಾಮಾಡಳಿತ ಅಧಿಕಾರಿಗಳು ಬೇಜವಾಬ್ದಾರಿ ತೋರದೇ ಪಾರದರ್ಶಕವಾಗಿ ಎಲ್ಲರಿಗೂ ಅವಕಾಶ ನೀಡಿ ಎಂದು ಸೂಚನೆ ನೀಡಿದರು.

ಮುಂಬರುವ ಜೆನ್ ಆಲ್ಫಾ, ಜೆನ್ ಬೀಟಾ ಪೀಳಿಗೆಯ ಬಗ್ಗೆ ಸರ್ಕಾರಗಳು ಈಗಲೇ ಚಿಂತಿಸಬೇಕು – ಪರಮೇಶ್ವರ್ ಕರೆ

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು, ; ಇಂದು ಎರಡು ಪ್ರಾಮುಖ್ಯವಾದ ವ್ಯಕ್ತಿಗಳನ್ನು ನೆನಪಿಸಿಕೊಂಡು ಗೌರವಿಸುವ ಸಂದರ್ಭ. ರಾಧಾಕೃಷ್ಣನ್ ಅವರು ಶಿಕ್ಷಕರಾಗಿ ಎಂಥಾ ಪರಿಣಾಮ ಬೀರಿದರು ಎಂಬ ನಿಟ್ಟಿನಲ್ಲಿ ಅವರನ್ನು ಗೌರವಿಸಿ, ಅವರ ಹುಟ್ಟುಹಬ್ಬವನ್ನು ಶಿಕ್ಷಕ ದಿನಾಚರಣೆಯನ್ನಾಗಿ ಆಚರಿಸುತ್ತಿದ್ದೇವೆ ಎಂದು ಉಪಮುಖ್ಯಮಂತ್ರಿಗಳು, ಕಂದಾಯ ಹಾಗೂ ಕ್ರೀಡಾ ಸಚಿವರಾದ ಡಾ.ಜಿ.ಪರಮೇಶ್ವರ್ ಅವರು ಹೇಳಿದರು.

ಭಾರತ ರತ್ನ ಡಾ. ಸರ್ವೇಪಲ್ಲಿ ರಾಧಾಕೃಷ್ಣನ್ ರವರ ಜನ್ಮ ದಿನಾಚರಣೆ ಅಂಗವಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆಯು ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿ ಆಯೋಜಿಸಿದ್ದ 'ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ' ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದ ಡಾ.ಜಿ.ಪರಮೇಶ್ವರ ಅವರು ಮೈಸೂರಿನಲ್ಲಿ ಪ್ರಾಧ್ಯಾಪಕರಾಗಿದ್ದ ರಾಧಾಕೃಷ್ಣನ್ ಅವರನ್ನು ಒಮ್ಮೆ ಅವರ ವಿದ್ಯಾರ್ಥಿಗಳು ಇಂದು ನಿಮ್ಮ ಜನ್ಮದಿನ ಆಚರಿಸಬೇಕು ಎಂದು ಕೇಳುತ್ತಾರೆ. ನನ್ನ ಜನ್ಮದಿನ ಆಚರಿಸುವ ಬದಲು ಶಿಕ್ಷಕರ ದಿನಾಚರಣೆಯಾಗಿ ಆಚರಿಸುವಂತೆ ತಿಳಿಸುತ್ತಾರೆ. ಅವರಿಗೆ ಗೌರವ ಸೂಚಿಸುವ ಸಲುವಾಗಿ ಇಡೀ ಶಿಕ್ಷಕ ಸಮುದಾಯವನ್ನು ಇಂದು ಗೌರವಿಸಲಾಗುತ್ತಿದೆ ಎಂದು ಶಿಕ್ಷಕರ ದಿನದ ಇತಿಹಾಸವನ್ನು ನೆನಪಿಸಿದರು.

ಕೋಟ್ಯಂತರ ಶಿಕ್ಷಕರು ದೇಶವನ್ನು ಕಟ್ಟಿ ಹೋಗಿದ್ದಾರೆ. ಈಗಲೂ ಆ ಕೆಲಸ ಮುಂದುವರೆದಿದೆ. ಹಾಗಾಗಿ ಈ ಸಂದರ್ಭದಲ್ಲಿ ಶಿಕ್ಷಕ ಸಮುದಾಯಕ್ಕೆ ಕೋಟಿಕೋಟಿ ನಮನಗಳನ್ನು ಸಲ್ಲಿಸುವುದಾಗಿ ತಿಳಿಸಿದರು.

ಎರಡನೆಯದಾಗಿ, ಜ್ಯೋತಿಬಾ ಫುಲೆಯವರು. ದೇಶದಲ್ಲೇ ಮೊದಲ ಬಾರಿಗೆ ಮಹಿಳೆಯರಿಗೆ ಶಿಕ್ಷಣ ನೀಡುವ ಕೆಲಸ ಆರಂಭಿಸಿದ ಮಹಾನ್ ವ್ಯಕ್ತಿ ಜ್ಯೋತಿಬಾ ಫುಲೆ ಅವರು. ಅವರಿಗೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಕೊಟ್ಟಂತಹ ತೊಂದರೆಗಳು ಯಾರಿಂದಲೂ ಸಹಿಸಲು ಸಾಧ್ಯವಿಲ್ಲ. ಅವರು ಸಂಕಲ್ಪ ಮಾಡಿ 1845ರಲ್ಲಿ ಶಿಕ್ಷಕ ವೃತ್ತಿಯನ್ನು ಪ್ರಾರಂಭಿಸುತ್ತಾರೆ. ಪರ್ಷಿಯನ್ ಶಿಕ್ಷಕ ಗಫರ್ ಖಾನ್ ಎನ್ನುವವರು ಫುಲೆ ದಂಪತಿಗಳಿಗೆ ಆಶ್ರಯ ನೀಡಿದ್ದ ಕತೆಯನ್ನು ಸ್ಮರಿಸಿದ ಪರಮೇಶ್ವರ ಅವರು, ದೇಶದಲ್ಲಿ ಶಾಲೆಯ ಉಗಮ ಹೇಗಾಯಿತು ಎಂಬುದನ್ನು ಕೂಡ ತಿಳಿಸಿದರು.

ಹೊಸ ಚಿಂತನೆಗಳು ಇಂದು ಎಲ್ಲಾ ಕಡೆಗಳಿಂದ ಹೊರಟಿವೆ. ಗುರುವೆ ಜ್ಞಾನದ ಬೆಳಕು, ಗುರುವೆ ಬದುಕಿನ ದಾರಿ, ಗುರುವೆ ಯಶಸ್ಸಿನ ಮೆಟ್ಟಿಲು ಎಂದು ಗುರುವಿಗೆ ಎಲ್ಲರಿಗಿಂತ ಶ್ರೇಷ್ಠ ಸ್ಥಾನ ಕೊಟ್ಟಿದ್ದೇವೆ. ಗುರುಗಳಿಗೆ ಭಾರತದಲ್ಲಿ ಕೊಟ್ಟಿರುವ ಸ್ಥಾನವನ್ನು ಜಗತ್ತಿನ ಬೇರೆ ಯಾವ ದೇಶದಲ್ಲೂ ನೋಡಲು ಸಾಧ್ಯವಿಲ್ಲ. ರಾಮಾಯಣ, ಮಹಾಭಾರತದಲ್ಲಿ ಗುರುವಿಗೆ ಏನೆಲ್ಲ ಗೌರವ ನೀಡಲಾಗಿತ್ತು ಎಂಬುದನ್ನು ಸಹ ನೋಡಬಹುದು ಎಂದು ಗುರು ಪರಂಪರೆಯ ಇತಿಹಾಸ ನೆನೆದರು.

ಮೊದಲನೇ ಪಂಚವಾರ್ಷಿಕ ಯೋಜನೆಯಲ್ಲಿ ಶಿಕ್ಷಣ, ಆರೋಗ್ಯ, ಕೈಗಾರಿಕೆ ಮತ್ತು ಗ್ರಾಮೀಣಾಭಿವೃದ್ಧಿಗೆ ಆದ್ಯತೆ ನೀಡಿದರು. ಶಿಕ್ಷಣ ಇಡೀ ಮನುಷ್ಯನನ್ನು ಬದಲಾವಣೆ ಮಾಡುತ್ತದೆ. ಅನಕ್ಷರಸ್ಥರಾಗಿದ್ದರೆ ನಾವು ಯಾವ ಸ್ಥಿತಿಯಲ್ಲಿ ಇರುತ್ತಿದ್ದೆವು ಎಂದು ಊಹಿಸಿಕೊಳ್ಳಬೇಕು. ಶಿಕ್ಷಣ ವ್ಯಕ್ತಿಯನ್ನು, ಸಮಾಜವನ್ನು ಮತ್ತು ದೇಶವನ್ನು ಬದಲಾವಣೆ ಮಾಡುತ್ತದೆ ಎಂದು ಶಿಕ್ಷಣದ ಮಹತ್ವವನ್ನು ಹೇಳಿದರು.

ಕಳೆದ ಬಜೆಟ್‌ನಲ್ಲಿ ಸಿದ್ದರಾಮಯ್ಯ ಅವರು ಶಿಕ್ಷಣಕ್ಕೆ ಶೇ 11.50ರಷ್ಟು ಅನುದಾನ ನೀಡಿದ್ದಾರೆ. ಕೇಂದ್ರ ಸರ್ಕಾರ ಶಿಕ್ಷಣಕ್ಕೆ ಶೇ. 2.8 ರಷ್ಟು ಅನುದಾನ ನೀಡುತ್ತಿದೆ. ಈ ಪ್ರಮಾಣ ಹೆಚ್ಚಾಗಬೇಕು ಎಂದು ಅವರು ಒತ್ತಾಯಿಸಿದರು.

ಪುಟ್ಟ ದೇಶ ದಕ್ಷಿಣ ಕೋರಿಯಾದಲ್ಲಿ ಜಗತ್ತಿನಲ್ಲೇ ಹೆಚ್ಚಿನ ಸಂಖ್ಯೆಯಲ್ಲಿ ಪಿಹೆಚ್‌ಡಿ ಪಡೆಯುತ್ತಿದ್ದಾರೆ. ಶಿಕ್ಷಣದಿಂದಾಗಿ ಕಳೆದ ಇಪ್ಪತ್ತೈದು – ಮೂವತ್ತು ವರ್ಷದಲ್ಲಿ ಪ್ರಪಂಚದ ಭೂಪಟದಲ್ಲಿ ಅಭಿವೃದ್ಧಿಶೀಲ ರಾಷ್ಟ್ರಗಳ ಪೈಕಿ ದಕ್ಷಿಣ ಕೊರಿಯಾದ ಸ್ಥಾನವೇ ಬದಲಾಗಿದೆ. ಭಾರತದಲ್ಲಿ ಇಷ್ಟು ದೊಡ್ಡ ಪ್ರಮಾಣದಲ್ಲಿ ಜನಸಂಖ್ಯೆ ಇರುವುದರಿಂದ ಶಿಕ್ಷಣಕ್ಕೆ ಹೆಚ್ಚು ಹಣ ಖರ್ಚು ಮಾಡಿದ್ದರೆ ಜಗತ್ತನ್ನೇ ಆಳಲು ಸಾಧ್ಯವಿತ್ತು ಎನ್ನುವ ವಿಶ್ವಾಸ ವ್ಯಕ್ತಪಡಿಸಿದರು.

38 ವಿಶ್ವವಿದ್ಯಾಲಯಗಳು ಕರ್ನಾಟಕದಲ್ಲಿವೆ. ಯಾವ ವಿಶ್ವವಿದ್ಯಾಲಯ ಆರೋಗ್ಯಕರವಾಗಿವೆ. ಯುಜಿಸಿ ಅವರು ಎಷ್ಟು ಅನುದಾನ ನೀಡುತ್ತಿದ್ದಾರೆ. ನಿಮ್ಮ ಆದ್ಯತೆ ಯಾವುದರ ಮೇಲಿದೆ? ಇಡೀ ಸಮುದಾಯವನ್ನು ಪ್ರಗತಿಪರ ಚಿಂತನೆಗೆ ತೆಗೆದುಕೊಂಡು ಹೋಗಿ ದೇಶವನ್ನು ಅಭಿವೃದ್ಧಿ ಮಾಡುವುದರ ಮೇಲಿದೆಯೇ? ಇಲ್ಲವೇ? ಎಂಬುದನ್ನು ನಾವು ಆಲೋಚಿಸಬೇಕಿದೆ ಎಂದು ಶಿಕ್ಷಣ ಕ್ಷೇತ್ರದ ಬಗ್ಗೆ ಕೇಂದ್ರ ಸರ್ಕಾರದ ನಿರ್ಲಕ್ಷ್ಯ ಧೋರಣೆಯ ಬಗ್ಗೆ ಆಕ್ರೋಶ ಹೊರಹಾಕಿದರು.

ಅರ್ಜಿ ಹಿಡಿದ ಕೈಗಳಿಗೆ ದರ್ಪದ ಉತ್ತರ: ಇದು ಪ್ರಜಾಸೇವೆಯೋ, ದಬ್ಬಾಳಿಕೆಯೋ?

ಸೂರ್ಯಪ್ರಗತಿನ್ಯೂಸ್.ಕಾಂ



ಪಾವಗಡ: . ಆದರೆ ಅಧಿಕಾರದ ಮದ ನೆತ್ತಿಗೇರಿದಾಗ ಹೇಗೆ ವರ್ತಿಸುತ್ತಾರೆ ಎಂಬುದಕ್ಕೆ ವೈ.ಎನ್. ಹೊಸಕೋಟೆಯಲ್ಲಿ ನಡೆದ ಪ್ರಸಂಗವೇ ತಾಜಾ ಉದಾಹರಣೆ. ತುಮಕೂರು ಜಿಲ್ಲೆ ಪಾವಗಡ ತಾಲೂಕಿನ ವೈ.ಎನ್. ಹೊಸಕೋಟೆಯಲ್ಲಿ ಇತ್ತೀಚೆಗೆ 'ಪ್ರಜಾಸೇವಾ ಆಂದೋಲನ' ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇದಿಕೆಯಲ್ಲಿ ಸಾರ್ವಜನಿಕ ಹಿತಾಸಕ್ತಿಯ ಗಂಭೀರ ವಿಷಯವೊಂದನ್ನು ಪ್ರಸ್ತಾಪಿಸಲಾಯಿತು. ಊರಿನ ಸಂತೆ ಮೈದಾನದ ಸರ್ಕಾರಿ ಜಮೀನು ಒತ್ತುವರಿಯಾಗಿದೆ. ಅದನ್ನು ತೆರವುಗೊಳಿಸಿ ಸಾರ್ವಜನಿಕ ಆಸ್ತಿಯನ್ನು ಸಂರಕ್ಷಿಸಬೇಕು ಎಂದು ಆಮ್ ಆದ್ಮಿ ಪಕ್ಷದ ತಾಲೂಕು ಅಧ್ಯಕ್ಷರು ಪಾವಗಡ ಶಾಸಕ ಹೆಚ್.ವಿ. ವೆಂಕಟೇಶ್ ಅವರಿಗೆ ಮನವಿ ಪತ್ರ ಸಲ್ಲಿಸಲು ಮುಂದಾದರು. ಜನರ ಸಮಸ್ಯೆ ಆಲಿಸಬೇಕಾದ ಶಾಸಕರು ತೋರಿದ ಪ್ರತಿಕ್ರಿಯೆ ಪ್ರಜಾಪ್ರಭುತ್ವದ ಆಶಯಗಳನ್ನೇ ಅಣಕಿಸುವಂತಿತ್ತು. ಸಾರ್ವಜನಿಕ ವೇದಿಕೆಯಲ್ಲಿಯೇ ಏಕವಚನದಲ್ಲಿ "ಏಯ್, ಅರ್ಜಿ ಕೊಟ್ಟಿದ್ದೀಯಾ... ಹೋಗ್ತಾ ಇರ್ಬೇಕ್! ಏಯ್, ಹೋಗ್ತಾ ಇರು!" ಎಂದು ಗದರಿಸಿ, ದರ್ಪ ತೋರಿದ್ದಾರೆ. ಜನಪ್ರತಿನಿಧಿಯೊಬ್ಬರಿಗೆ ಇದು ಶೋಭೆ ತರುವ ನಡವಳಿಕೆಯಲ್ಲ.

ಈ ಘಟನೆ ಎತ್ತುವ ಗಂಭೀರ ಪ್ರಶ್ನೆಗಳು:

ಸೇವಕನೋ, ಸುಲ್ತಾನನೋ?: ಮತ ಕೇಳುವಾಗ ಜನರ ಮನೆ ಬಾಗಿಲಿಗೆ ಕೈಮುಗಿದು ಬರುವ ರಾಜಕಾರಣಿಗಳು, ಗದ್ದುಗೆ ಏರಿದ ಕೂಡಲೇ ಸಾಮಾನ್ಯ ಪ್ರಜೆಯನ್ನು ಕಡೆಗಣಿಸುವುದು ಯಾವ ಸಂಸ್ಕೃತಿ? ಇದು ಪ್ರಜಾಪ್ರಭುತ್ವವೋ ಅಥವಾ ದರ್ಪದ ದರ್ಬಾರೋ?

ಮನವಿ ಸಲ್ಲಿಸುವುದು ಅಪರಾಧವೇ? ಸಾರ್ವಜನಿಕ ಆಸ್ತಿಯನ್ನು ರಕ್ಷಿಸಿ ಎಂದು ಮನವಿ ಸಲ್ಲಿಸುವುದು ಪ್ರತಿಯೊಬ್ಬ ನಾಗರಿಕನ ಸಂವಿಧಾನಬದ್ಧ ಹಕ್ಕು. ಅದನ್ನು ಸ್ವೀಕರಿಸಿ ಕ್ರಮ ಕೈಗೊಳ್ಳುವುದನ್ನು ಬಿಟ್ಟು ದಬ್ಬಾಳಿಕೆ ಮೆರೆಯುವುದು ಜನವಿರೋಧಿ ಧೋರಣೆಯ ಪರಮಾವಧಿ.

'ಪ್ರಜಾಸೇವಾ' ಆಂದೋಲನದ ವಿಪರ್ಯಾಸ:

ಕಾರ್ಯಕ್ರಮದ ಹೆಸರೇ 'ಪ್ರಜಾಸೇವಾ ಆಂದೋಲನ'. ಆದರೆ ಅಲ್ಲಿ ನಡೆದದ್ದು ಪ್ರಜೆಗಳ ಕಡೆಗಣನೆ ಮತ್ತು ಅಧಿಕಾರದ ಪ್ರದರ್ಶನ. ಹೆಸರಿನಲ್ಲಿ ಮಾತ್ರ ಸೇವೆ ಇದ್ದು, ನಡವಳಿಕೆಯಲ್ಲಿ ಅಹಂಕಾರ ತುಂಬಿದ್ದರೆ ಅಂತಹ ವೇದಿಕೆಗಳಿಗೆ ಅರ್ಥವೇನು? ಸಾರ್ವಜನಿಕ ಆಸ್ತಿಗಳ ಒತ್ತುವರಿ ವಿರುದ್ಧ ಧ್ವನಿ ಎತ್ತುವುದು ಪಕ್ಷಾತೀತವಾಗಿ ಪ್ರತಿಯೊಬ್ಬ ಪ್ರಜೆಯ ಕರ್ತವ್ಯ. ಅಂತಹ ದನಿಗಳನ್ನು ದಬ್ಬಾಳಿಕೆಯಿಂದ ಅಡಗಿಸಲು ಯತ್ನಿಸುವುದು ಅಪಾಯಕಾರಿ ಬೆಳವಣಿಗೆ. ಅಧಿಕಾರ ಶಾಶ್ವತವಲ್ಲ, ಜನರ ತೀರ್ಪೇ ಅಂತಿಮ ಎಂಬ ಸತ್ಯವನ್ನು ಜನಪ್ರತಿನಿಧಿಗಳು ಮರೆಯಬಾರದು.

ಮೂಢ ನಂಬಿಕೆ ತೊರೆದು ವೈಚಾರಿಕತೆಯೊಂದಿಗೆ ಬಾಳಿ

ಗುರುವಂದನಾ ಕಾರ್ಯಕ್ರಮದಲ್ಲಿ ಮಾದರ ಚೆನ್ನಯ್ಯ ಸ್ವಾಮೀಜಿ ಅಭಿಮತ

ಸೂರ್ಯಪ್ರಗತಿನ್ಯೂಸ್.ಕಾಂ



ಚಿಂಚನಹಳ್ಳಿಯಲ್ಲಿ ನಡೆದ ಕೊರಟಗೆರೆ;– ಆಧ್ಯಾತ್ಮಿಕತೆ, ವೈಚಾರಿಕತೆ, ಸಾಮಾಜಿಕ ಹೊಣೆಗಾರಿಕೆ ಹಾಗೂ ಕುಟುಂಬ ಮೌಲ್ಯಗಳು ಗ್ರಾಮೀಣ ಭಾಗದಲ್ಲಿ ಇನ್ನೂ ಜೀವಂತವಾಗಿ ಉಳಿದಿವೆ. ಎಂದು ಚಿತ್ರದುರ್ಗದ ಮಾದಾರ ಚೆನ್ನಯ್ಯ ಗುರು ಪೀಠದ ಶ್ರೀ ಬಸವಮೂರ್ತಿ ಮಾದರ ಚೆನ್ನಯ್ಯ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಬೊಮ್ಮಲದೇವಿಪುರ ಗ್ರಾಪಂ ವ್ಯಾಪ್ತಿಯ ಚುಂಚನಹಳ್ಳಿಯ ದೊಡ್ಡ ಮನೆ' ಕುಟುಂಬದ ವತಿಯಿಂದ ಆಯೋಜಿಸಲಾಗಿದ್ದ ಗುರುವಂದನಾ ಹಾಗೂ ಕುಟುಂಬದ ಹಿರಿಯರಿಗೆ ಗೌರವ ಸಮರ್ಪಣೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಆಧ್ಯಾತ್ಮಿಕತೆ ಎಂದರೆ ಕೇವಲ ಬಾಹ್ಯ ಆಚರಣೆಗಳಲ್ಲ ಅದು ಮನಸ್ಸನ್ನು ಪರಿಶುದ್ಧಗೊಳಿಸುವ ಮತ್ತು ಆತ್ಮಾವಲೋಕನ ಮಾಡಿಕೊಳ್ಳುವ ಪ್ರಕ್ರಿಯೆ.ಧರ್ಮ ಮತ್ತು ಆಧ್ಯಾತ್ಮಿಕತೆಯ ಜೊತೆಗೆ ಪ್ರತಿಯೊಬ್ಬರೂ ವೈಚಾರಿಕ ಹಾಗೂ ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ವಿಚಾರಶಕ್ತಿ ಮತ್ತು ವಿವೇಕದಿಂದ ಆಲೋಚಿಸಿದಾಗ ಮಾತ್ರ ನಿಜವಾದ ಜ್ಞಾನ ಲಭಿಸಲು ಸಾಧ್ಯ ಎಂದು ಪ್ರತಿಪಾದಿಸಿದರು.

ಮೂಢನಂಬಿಕೆಗಳು ಮಾನವನ ಸರ್ವತೋಮುಖ ಪ್ರಗತಿಗೆ ಬಹು ದೊಡ್ಡ ಅಡ್ಡಿಯಾಗಿವೆ. ಸತ್ಯ ಮತ್ತು ವೈಚಾರಿಕ ದೃಷ್ಟಿಕೋನವನ್ನು ಒಪ್ಪಿಕೊಳ್ಳುವುದು ಇಂದಿನ ಕಾಲಘಟ್ಟದ ತುರ್ತು ಅಗತ್ಯ. ಮೂಢನಂಬಿಕೆಗಳನ್ನು ಸಂಪೂರ್ಣವಾಗಿ ತೊರೆದು, ಸದ್ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದು ಕರೆ ನೀಡಿದರು.

ಮನೆ ಕಟ್ಟುವ ಉದ್ದೇಶ: ಮನೆ ಎನ್ನುವುದು ಕೇವಲ ಒಂದು ಕುಟುಂಬದ ಸ್ವಂತ ಹಿತಾಸಕ್ತಿ, ವೈಯಕ್ತಿಕ ರಕ್ಷಣೆ ಮತ್ತು ಸಾಂಸಾರಿಕ ಅಗತ್ಯಗಳಿಗಾಗಿ ನಿರ್ಮಾಣವಾಗುತ್ತದೆ. ಅದರಲ್ಲಿ ವ್ಯಕ್ತಿಗತ ಜವಾಬ್ದಾರಿ ಹಾಗೂ ನನ್ನದು ಎಂಬ ಭಾವನೆ ಪ್ರಮುಖವಾಗಿರುತ್ತದೆ. **ಮಠಕಟ್ಟುವ ಉದ್ದೇಶ:** ಮಠ ಎನ್ನುವುದು ಯಾವುದೇ ಒಬ್ಬ ವ್ಯಕ್ತಿಗೆ ಅಥವಾ ಸ್ವಾರ್ಥಕ್ಕಾಗಿಯಲ್ಲ ಬದಲಾಗಿ ಇಡೀ ಸಮಾಜದ ಕಲ್ಯಾಣಕ್ಕಾಗಿ ನಿರ್ಮಾಣ ವಾಗುವ ಪವಿತ್ರ ಕೇಂದ್ರ. ಮಠವು ಜ್ಞಾನ ದಾಸೋಹ, ಅನ್ನ ದಾಸೋಹ, ಉತ್ತಮ ಸಂಸ್ಕಾರ ಹಾಗೂ ವೈಚಾರಿಕ ಚಿಂತನೆಗಳನ್ನು ನೀಡಿ ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸುವ ನಿಸ್ವಾರ್ಥ ಸೇವೆಯ ತಾಣವಾಗಿದೆ .ಮನೆಯು ಒಂದು ಕುಟುಂಬವನ್ನು ಬೆಸೆಯುವ ಕಾರ್ಯ ಮಾಡಿದರೆ, ಮಠವು ಇಡೀ ಸಮಾಜವನ್ನು ಒಗ್ಗೂಡಿಸಿ, ಮಾನವೀಯ ಮೌಲ್ಯಗಳನ್ನು ಮತ್ತು ಸಂಸ್ಕೃತಿಯನ್ನು ಎತ್ತಿಹಿಡಿಯುವ ಕಾರ್ಯ ಮಾಡುತ್ತದೆ' ಎಂದು ಅವರು ತಿಳಿಸಿದರು.

ಕುಟುಂಬದ ಹಿರಿಯರಿಗೆ ಗೌರವ ಸಮರ್ಪಣೆ ಹಾಗೂ ಸಂಸ್ಕಾರಕಾರ್ಯಕ್ರಮದ ವಿಶೇಷ ಅಂಗವಾಗಿ ನಡೆದ ಕುಟುಂಬದ ಹಿರಿಯರಿಗೆ ಗೌರವ ಸಮರ್ಪಣೆ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಶ್ರೀಗಳು, ತಂದೆ–ತಾಯಿ, ಶಿಕ್ಷಕರು ಹಾಗೂ ಮನೆಯ ಹಿರಿಯರನ್ನು ಆದರದಿಂದ ಕಾಣುವುದು ಮತ್ತು ಅವರ ಮಾರ್ಗದರ್ಶನದಲ್ಲಿ ನಡೆಯುವುದು ನಮ್ಮ ಸಂಸ್ಕೃತಿಯ ಶಕ್ತಿ.ಇಂದಿನ ಯುವ ಪೀಳಿಗೆಯಲ್ಲಿ ಸಂಸ್ಕಾರ, ವಿನಯ ಹಾಗೂ ಹಿರಿಯರೆಡೆಗೆಗೌರವ ಭಾವನೆಯನ್ನು ಮೂಡಿಸುವುದು ಅತ್ಯಗತ್ಯ. ಇಂದು ದೊಡ್ಡ ಮನೆ ಕುಟುಂಬದವರು ತಮ್ಮ ಹಿರಿಯರನ್ನು ಗೌರವಿಸಿ ಆಶೀರ್ವಾದ ಪಡೆಯುತ್ತಿರುವುದು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತದೆ ಎಂದರು.

ಇದೆ ಸಂದರ್ಭದಲ್ಲಿ ವಕೀಲ ಸಿದ್ದಗಂಗಯ್ಯ, ಶಿಕ್ಷಕ ರವಿಕುಮಾರ್, ನರಸಿಂಹಮೂರ್ತಿ, ರಾಜು, ಹಾಗೂ ವೀರಕ್ಯಾತಪ್ಪ ಧಾರ್ಮಿಕ ಮುಖಂಡರು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಭಾಗವಹಿಸಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಗುರುಗಳಿಗೆ ಪುಷ್ಪಾ ಮಳೆಗೆರೆದು ವಿಶಿಷ್ಟ ರೀತಿಯಲ್ಲಿ ಶಿಕ್ಷಕರ ದಿನಾಚರಣೆ

ಸೂರ್ಯಪ್ರಗತಿನ್ಯೂಸ್.ಕಾಂ



ಕುಣಿಗಲ್: ವಿದ್ಯಾರ್ಥಿಗಳು ಗುರುಗಳಿಗೆ ಹೂಗಳ ಪುಷ್ಪಾರ್ಚನೆ ಗೈಯುವ ಮೂಲಕ ವಿಶೇಷ ರೀತಿಯಲ್ಲಿ ಶಿಕ್ಷಕರ ದಿನಾಚರಣೆ ಆಚರಿಸಿ ಸಂಭ್ರಮಿಸಿದರು.

ಪಟ್ಟಣದ ಜ್ಞಾನಭಾರತಿ ವಿದ್ಯಾ ಸಂಸ್ಥೆಯ ವಿದ್ಯಾರ್ಥಿಗಳು ಸರ್ವಪಲ್ಲಿ ಡಾ. ರಾಧಾಕೃಷ್ಣರವರ ಜನ್ಮ ದಿನದಂದು ಆಚರಿಸುವ ಶಿಕ್ಷಕರ ದಿನಾಚರಣೆ ಸಂದರ್ಭದಲ್ಲಿ ವಿದ್ಯಾರ್ಥಿಗಳು ಗುರುಗಳಿಗೆ ಪುಷ್ಪಾ ಮಳೆಗೆರೆದು ವಿಶಿಷ್ಟ ರೀತಿಯಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಕೃಷ್ಣ ಜನ್ಮಾಷ್ಟಮಿ ವೇಷ ಭೂಷಣ ಪ್ರದರ್ಶನ ಮಾಡಿದರು. ಈ ಸಂದರ್ಭದಲ್ಲಿ ಜ್ಞಾನಭಾರತಿ ವಿದ್ಯಾ ಸಂಸ್ಥೆಯ ಅಧ್ಯಕ್ಷರು ಮಾಜಿ ಶಾಸಕ ಬಿ.ಬಿ. ರಾಮಸ್ವಾಮಿಗೌಡ ಮಾತನಾಡುತ್ತಾ ವಿದ್ಯಾರ್ಥಿಗಳಲ್ಲಿ ಶಿಸ್ತು ಸಂಯಮ ಸಂಸ್ಕೃತಿ ಬಾಲ್ಯದಿಂದಲೂ ಜೀವನದಲ್ಲಿ ಅಳವಡಿಸಿಕೊಂಡಾಗ ಉತ್ತಮ ಸಮಾಜದ ಒಳ್ಳೆಯ ಆದರ್ಶ ವ್ಯಕ್ತಿಗಳಾಗಿ ರೂಪಗೊಂಡು ಮಾದರಿಯಾಗಿರುತ್ತಾರೆ ಇಂದಿನ ವಿದ್ಯಾಭ್ಯಾಸವು ಈಗಿನ ಆಧುನಿಕ ತಂತ್ರಜ್ಞಾನ ವ್ಯವಸ್ಥೆಗೆ ವಿದ್ಯಾರ್ಥಿ ಗಳು ಹೊಂದಿಕೊಂಡು ಗುರು ಹಿರಿಯರು ಪೋಷಕರು ತಂದೆ ತಾಯಿಗಳಿಗೆ ಗೌರವ ನೀಡುವಂತಹ ಆದರ್ಶ ವ್ಯಕ್ತಿಗಳಾಗಿ ರೂಪಗೊಳ್ಳಬೇಕಾಗಿದೆ ಮಕ್ಕಳು ಕೃಷ್ಣಾಷ್ಟಮಿ ಅಂಗವಾಗಿ ವಿವಿಧ ವೇಷ ಭೂಷಣಗಳನ್ನ ಅಲಂಕಾರಗೊಂಡಿದ್ದು ಶಾಲೆಯಲ್ಲಿ ಸಂಭ್ರಮ ಮನೆ ಮಾಡಿದೆ ಮಕ್ಕಳಿಗೆ ಬಿಡುವಿನ ವೇಳೆಯಲ್ಲಿ ಭಗವದ್ಗೀತೆ ಶ್ರೀ ಕೃಷ್ಣನ ವಿಚಾರಧಾರೆಗಳನ್ನು ಬೋಧಿಸಲು ಮುಂದಾಗುವುದರೊಂದಿಗೆ ಮಕ್ಕಳು ಸಂಸ್ಕಾರ ವಂತರಾಗಬೇಕಿದೆ. ಮಕ್ಕಳಲ್ಲಿ ಬರಿ ಮೊಬೈಲ್ ಹೆಚ್ಚಾಗಿದ್ದು ಈ ಬಗ್ಗೆ ಪೋಷಕರು ಗಮನಹರಿಸುವುದರೊಂದಿಗೆ ಮಕ್ಕಳಲ್ಲಿ ಸಂಸ್ಕಾರಯುತ ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಪೋಷಕರ ಮತ್ತು ಶಿಕ್ಷಕರ ಜವಾಬ್ದಾರಿಯಾಗಿದೆ ಎಂದು ಕಿವಿಮಾತು ಹೇಳಿದರು. ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಚೆನ್ನಪ್ಪ. ನಿರ್ದೇಶಕರಾದ ಬೆಟ್ಟಸ್ವಾಮಿ ಗೌಡ.ಕಾಲೇಜಿನ ಪ್ರಾಚಾರ್ಯರಾದ ಗೋವಿಂದೇಗೌಡ. ಮುಖ್ಯ ಶಿಕ್ಷಕರಾದ ಪ್ರಕಾಶ್. ಗಂಗಮ್ಮ. ಶಿಕ್ಷಕರು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಗಣಿಬಾಧಿತ ಪ್ರದೇಶಗಳ ಅಭಿವೃದ್ಧಿ ಹಣದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಮಾಡಿ

ಸೂರ್ಯಪ್ರಗತಿನ್ಯೂಸ್.ಕಾಂ



ತಿಪಟೂರು: ಗಣಿಬಾಧಿತ ಪ್ರದೇಶಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಹಣವನ್ನು ಸಮರ್ಪಕವಾಗಿ ಬಳಸಿಕೊಂಡು ತಿಪಟೂರು ಸೇರಿದಂತೆಜಿಲ್ಲೆಯಜನರಿಗೆಅನುಕೂಲವಾಗುವಂತೆ ಸೂಪರ್ ಸ್ಪೆಷಾ ಲಿಟಿ ಆಸ್ಪತ್ರೆ ನಿರ್ಮಿಸಬೇಕು ಎಂದು ಜೆಡಿಎಸ್ ಮುಖಂಡ ಕೆ.ಟಿ.ಶಾಂತ್ ಕುಮಾರ್ ಒತ್ತಾಯಿಸಿದ್ದಾರೆ.

ತಾಲೂಕಿನ ಕೆ.ಬಿ. ಕ್ರಾಸ್‌ನ ಪ್ರವಾಸಿ ಮಂದಿರದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು ಗಣಿಬಾಧಿತ ಪ್ರದೇಶಗಳ ಅಭಿವೃದ್ಧಿ ಗಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ನೂರಾರು ಕೋಟಿ ರೂ. ಅನುದಾನದ ಬಳಕೆಯ ಬಗ್ಗೆ ಸಾರ್ವಜನಿಕರಿಗೆ ಸ್ಪಷ್ಟ ಮಾಹಿತಿ ನೀಡಬೇಕು. ಸುಮಾರು ರೂ.300 ಕೋಟಿ ಹಣ ಎಲ್ಲಿಗೆ ಹೋಯಿತು. ಅದರ ಮೂಲಕ ಜನರಿಗೆ ಯಾವ ಶಾಶ್ವತ ಅಭಿ ವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂಬುದನ್ನು ಜಿಲ್ಲಾಡಳಿತ ಹಾಗೂ ಸಂಬಂಧಿಸಿದ ಅಧಿಕಾರಿಗಳು 15 ದಿನಗಳ ಒಳಗೆ ಬಹಿರಂಗಪಡಿಸಬೇಕು ಎಂದು ಅವರು ಆಗ್ರಹಿಸಿದರು. ಹಾಗೂ ತಾಲೂಕಿನ ಸುತ್ತಮುತ್ತಲಿನ ಗ್ರಾಮೀಣ ಭಾಗದ ಜನರು ಆರೋಗ್ಯಸಮಸ್ಯೆಗಳಿಗೆ ಬೆಂಗಳೂರು ಸೇರಿದಂತೆ ದೂರದ ಹಾಸನ ನಗರಗಳಿಗೆ ತೆರಳಬೇಕಾದ ಪರಿಸ್ಥಿತಿ ಇದೆ. ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ಹೋಗುವ ಸಮಯದಲ್ಲಿ ಮಾರ್ಗದಲ್ಲಿ ಮಧ್ಯೆ ಎಷ್ಟು ಜನರು ಸಾವನಪ್ಪಿದ್ದಾರೆ ಅಂತಹ ಅನಾಹುತಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಹಾಗೂ ಬಡವರು ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಇದರಿಂದ ಆರ್ಥಿಕ ಹೊರೆ ಹೆಚ್ಚಾಗುತ್ತಿದೆ. ಆದ್ದರಿಂದ ಗಣಿಬಾಧಿತ ನಿಧಿಯನ್ನು ಸಮರ್ಪಕವಾಗಿ ಬಳಸಿಕೊಂಡು ಆಧುನಿಕ ಸೌಲಭ್ಯಗಳನ್ನೊಳಗೊಂಡ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಕೆ.ಬಿ.ಕ್ರಾಸ್ ಸಮೀಪ ನಿರ್ಮಿಸಿದರೆ ನಾಲ್ಕು ತಾಲೂಕು ಜನರಿಗೆ ಹಾಗೂ ಸಾವಿರಾರು ಜನರಿಗೆ ಅನುಕೂಲವಾಗಲಿದೆ.

ಈ ಬಗ್ಗೆ ಸರ್ಕಾರ ಹಾಗೂ ಜಿಲ್ಲಾ ಡಳಿತ ತಕ್ಷಣ ಕ್ರಮ ಕೈಗೊಂಡು, ತಿಪಟೂರು ಭಾಗದ ಬಹುದಿನಗಳ ಆರೋಗ್ಯ ಮೂಲಸೌಕರ್ಯದ ಬೇಡಿಕೆಗೆ ಸ್ಪಂದಿಸ ಬೇಕು ಎಂದು ಜೆಡಿಎಸ್ ಮುಖಂಡ ಕೆ.ಟಿ.ಶಾಂತ್ ಕುಮಾರ್ ಆಗ್ರಹಿಸಿದರು.

ಮಣ್ಣಿನ ಗಣೇಶನಿಗೆ ಮಕ್ಕಳ ಕೈಚಳಕ

ಪರಿಸರ ಸ್ನೇಹಿ ಗಣೇಶ ಮೂರ್ತಿ ತಯಾರಿಕೆಯ ಮೂಲಕ ಹಬ್ಬಕ್ಕೆ ಹೊಸ ಸ್ಪರ್ಶ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಗಣೇಶ ಚತುರ್ಥಿ ಹಬ್ಬ ಎಂದರೆ ಸಂಭ್ರಮ, ಸಡಗರ, ಭಕ್ತಿ. ಆದರೆ ಈ ಸಂಭ್ರಮದ ಜೊತೆಗೆ ಪರಿಸರ ಸಂರಕ್ಷಣೆಯ ಕಾಳಜಿಯನ್ನೂ ಬೆಳೆಸಬಹುದು ಎಂಬುದನ್ನು ತುಮಕೂರಿನ ಪುಟಾಣಿಗಳು ತಮ್ಮ ಕೈಚಳಕದ ಮೂಲಕ ಸಾರಿದರು. ನಗರದ ಪ್ರೆಸ್ ಕ್ಲಬ್ ಆವರಣದಲ್ಲಿ ಆಲದ ಮರದ ನೆರಳಿನಲ್ಲಿ ಮಕ್ಕಳು ಜೇಡಿ ಮಣ್ಣನ್ನು ಕೈಯಲ್ಲಿ ಹಿಡಿದುಕೊಂಡು ಗಣೇಶ ಮೂರ್ತಿಗಳಿಗೆ ರೂಪ ನೀಡುತ್ತಿದ್ದ ದೃಶ್ಯ ಎಲ್ಲರ ಗಮನ ಸೆಳೆಯಿತು. ಪುಟ್ಟ ಕೈಗಳಲ್ಲಿ ಅರಳಿದ ಗಣೇಶನ ವಿವಿಧ ರೂಪಗಳು ಮಕ್ಕಳ ಸೃಜನಶೀಲತೆಗೆ ಸಾಕ್ಷಿಯಾದವು.

ಪ್ರೆಸ್ ಕ್ಲಬ್ ತುಮಕೂರು ಹಾಗೂ ವರ್ಣೋದಯ ಆರ್ಟ್ ಗ್ರೂಪ್ ವತಿಯಿಂದ ಆಯೋಜಿಸಲಾಗಿದ್ದ **ಪರಿಸರ ಸ್ನೇಹಿ ಗಣೇಶ ಮೂರ್ತಿ ತಯಾರಿಕಾ ಸ್ಪರ್ಧೆಯಲ್ಲಿ** ನೂರಾರು ಮಕ್ಕಳು ಉತ್ಸಾಹದಿಂದ ಪಾಲ್ಗೊಂಡರು. ತಮ್ಮ ಕಲ್ಪನೆಗೆ ತಕ್ಕಂತೆ ಜೇಡಿ ಮಣ್ಣಿನಿಂದ ಬಗೆಬಗೆಯ ಗಣೇಶ ಮೂರ್ತಿಗಳನ್ನು ತಯಾರಿಸುವ ಮೂಲಕ ಮಕ್ಕಳು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿದರು.

ಮಕ್ಕಳಿಗೆ ಸಾಥ್ ನೀಡಿದ ಪೋಷಕರು ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪುಟಾಣಿಗಳ ಉತ್ಸಾಹವನ್ನು ಹೆಚ್ಚಿಸಿದರು. ಮಣ್ಣನ್ನು ಹದಗೊಳಿಸಿ, ಅದಕ್ಕೆ ಆಕಾರ ನೀಡಿ, ಗಣೇಶನ ವಿವಿಧ ಭಂಗಿಗಳನ್ನು ಮೂಡಿಸುವಲ್ಲಿ ಮಕ್ಕಳು ತಲ್ಲೀನರಾಗಿದ್ದರು. ಸ್ಪರ್ಧೆಯ ವಾತಾವರಣದಲ್ಲಿ ಹಬ್ಬದ ಸಂಭ್ರಮವೂ ಮೇಳೈಸಿತ್ತು. ಕೇವಲ ಮೂರ್ತಿ ತಯಾರಿಸುವ ಸ್ಪರ್ಧೆಯಾಗಿರದೆ, ಮಕ್ಕಳಲ್ಲಿ ಕಲಾ ಕೌಶಲ್ಯ ಬೆಳೆಸುವುದು, ಸೃಜನಶೀಲತೆಯನ್ನು ಉತ್ತೇಜಿಸುವುದು ಹಾಗೂ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಬಳಕೆಯ ಕುರಿತು ಅರಿವು ಮೂಡಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿತ್ತು.

ಪ್ರತಿವರ್ಷ ಗಣೇಶ ಚತುರ್ಥಿಯ ಸಂದರ್ಭದಲ್ಲಿ ಪಿಒಪಿ ಸೇರಿದಂತೆ ಪರಿಸರಕ್ಕೆ ಹಾನಿಕಾರಕ ವಸ್ತುಗಳಿಂದ ತಯಾರಿಸಿದ ಮೂರ್ತಿಗಳ ಬದಲಿಗೆ ನೈಸರ್ಗಿಕ ಜೇಡಿ ಮಣ್ಣಿನ ಗಣೇಶ ಮೂರ್ತಿಗಳನ್ನು ಬಳಸುವ ಅಗತ್ಯವಿದೆ ಎಂಬ ಸಂದೇಶವೂ ಕಾರ್ಯಕ್ರಮದ ಮೂಲಕ ಮೂಡಿಬಂತು.

ಹಬ್ಬದ ಸಂಭ್ರಮದ ನಡುವೆಯೇ ಪರಿಸರದ ಕಾಳಜಿಯನ್ನು ಮಕ್ಕಳ ಮನಸ್ಸಿನಲ್ಲಿ ಬಿತ್ತುವ ಈ ಪ್ರಯತ್ನಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಯಿತು. ಪುಟ್ಟ ಕೈಗಳಿಂದ ರೂಪುಗೊಂಡ ಮಣ್ಣಿನ ಗಣೇಶ ಮೂರ್ತಿಗಳು, 'ಹಬ್ಬವೂ ಇರಲಿ... ಪರಿಸರವೂ ಉಳಿಯಲಿ'ಎಂಬ ಸಂದೇಶವನ್ನು ಸಾರಿದವು. ವರ್ಣೋದಯ ಆರ್ಟ್ ಗ್ರೂಪ್ ಅಧ್ಯಕ್ಷ ಕಿಶೋರ್ ಕುಮಾರ್ ಮಾತನಾಡಿ, ಮಕ್ಕಳಲ್ಲಿ ಕಲೆಯ ಮೇಲಿನ ಆಸಕ್ತಿ ಬೆಳೆಸುವುದರ ಜೊತೆಗೆ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಬಳಕೆಯ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗಣೇಶ ಚತುರ್ಥಿಯ ಸಂಭ್ರಮಕ್ಕೆ ಪರಿಸರ ಸ್ನೇಹಿ ಸ್ಪರ್ಶ ನೀಡಿದ ಪುಟಾಣಿಗಳ ಈ ಪ್ರಯತ್ನ, ಹಬ್ಬದ ಆಚರಣೆಯಲ್ಲೂ ಪರಿಸರ ಕಾಳಜಿಗೆ ಆದ್ಯತೆ ನೀಡಬೇಕೆಂಬುದನ್ನು ಮತ್ತೊಮ್ಮೆ ನೆನಪಿಸಿತು.

ರೋಟರಿ ಸೇವೆ ಶ್ಲಾಘಿಸಿದ ಉಪ ಮುಖ್ಯಮಂತ್ರಿ ಡಾ. ಪರಮೇಶ್ವರ್

ರೋಟರಿ ಸೆಂಟ್ರಲ್‌ನಿಂದ ಸಿದ್ಧಾರ್ಥ ಆಸ್ಪತ್ರೆಗೆ 5 ಡಯಾಲಿಸಿಸ್ ಯಂತ್ರ ಕೊಡುಗೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಸಮಾಜ ಸೇವಾ ಕಾರ್ಯಗಳಲ್ಲಿ ರೋಟರಿ ಸಂಸ್ಥೆಯು ಮುಂಚೂಣಿಯಲ್ಲಿದೆ. ಸಂಸ್ಥೆ ಪದಾಧಿಕಾರಿಗಳು, ಸದಸ್ಯರ ಸೇವಾ ಮನೋಭಾವ ಶ್ಲಾಘನೀಯ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದರು.

ಬಡ ರೋಗಿಗಳಿಗೆ ಸಹಾಯವಾಗಲೆಂದು ರೋಟರಿ ತುಮಕೂರು ಸೆಂಟ್ರಲ್ ಸಂಸ್ಥೆಯು ಸೋಮವಾರನಗರದ ಹೊರವಲಯದ ಸಿದ್ಧಾರ್ಥ ಆಸ್ಪತ್ರೆಗೆ ಐದು ಡಯಾಲಿಸಿಸ್ ಯಂತ್ರಗಳನ್ನು ಕೊಡುಗೆಯಾಗಿ ನೀಡಿತು. ತಮ್ಮಆಸ್ಪತ್ರೆಗೆ ಡಯಾಲಿಸಿಸ್ ಯಂತ್ರಗಳನ್ನು ಸ್ವೀಕಾರ ಮಾಡಿ ಮಾತನಾಡಿದ ಡಾ.ಪರಮೇಶ್ವರ್, ಸಿದ್ಧಾರ್ಥ ಆಸ್ಪತ್ರೆ ಉತ್ತಮ ಆರೋಗ್ಯ ಸೇವೆ ನೀಡುತ್ತಿದೆ. ಈ ಕಾರ್ಯದಲ್ಲಿ ರೋಟರಿ ಸಂಸ್ಥೆಯೂ ನಮ್ಮ ಕಾರ್ಯಕ್ಕೆ ಕೈ ಜೋಡಿಸಿರುವುದು ಹೆಮ್ಮೆಯ ವಿಚಾರ. ಸಹಕಾರ ಹೀಗೆ ಮುಂದುವರೆಯಲಿ. ರೊಟೇರಿಯನ್ ಬಿಳಿಗೆರೆ ಶಿವಕುಮಾರ್, ರೊಟೇರಿಯನ್ ಬೆಳ್ಳಿ ಲೋಕೇಶ್‌ಅವರು ನಮ್ಮ ಆಸ್ಪತ್ರೆಗೆ ಡಯಾಲಿಸಿಸ್ ಯಂತ್ರ ಕೊಡುಗೆಯಾಗಿ ನೀಡಲು ವಿಶೇಷ ಕಾಳಜಿವಹಿಸಿದ್ದರು ಎಂದರು.

ಸಿದ್ಧಾರ್ಥ ಸಂಸ್ಥೆಯ ಉಪ ಕುಲಪತಿ ಡಾ. ಲಿಂಗೇಗೌಡರು, ಡಾ. ಪ್ರಭಾಕರ್, ಡಾ.ವಿವೇಕ್ ವೀರಯ್ಯ ಈ ವೇಳೆ ಹಾಜರಿದ್ದರು. ರೋಟರಿ ತುಮಕೂರು ಸೆಂಟ್ರಲ್ ಅಧ್ಯಕ್ಷ ಕೃಷ್ಣಕುಮಾರ್ ಮಾತನಾಡಿ, ಸಿಎಸ್‌ಆರ್ ಫಂಡ್‌ನಲ್ಲಿ ಬೆಂಗಳೂರಿನ ಇಂದಿರಾ ನಗರ ರೋಟರಿ ಲೀಡ್ ಸಂಸ್ಥೆ ಸಹಯೋಗದಲ್ಲಿ ಐದು ಡಯಾಲಿಸಿಸ್ ಯಂತ್ರಗಳನ್ನು ವಿತರಿಸಲಾಗಿದೆ. ಹಿಂದೆಇದೇಆಸ್ಪತ್ರೆಗೆಐದು ಯಂತ್ರಗಳನ್ನು ಸಂಸ್ಥೆಯಿಂದ ನೀಡಿದ್ದು ರೋಗಿಗಳಿಗೆ ಪ್ರಯೋಜನವಾಗುತ್ತಿದೆ ಎಂದು ಹೇಳಿದರು.

ರೋಟರಿ ಕಾರ್ಯದರ್ಶಿ ದೊಡ್ಡಯ್ಯ, ರೋಟರಿ ಗೌರ್ನರ್ ಬಿಳಿಗೆರೆ ಶಿವಕುಮಾರ್, ಬೆಳ್ಳಿ ಲೋಕೇಶ್, ಹೆಬ್ಬೂರು ಶ್ರೀನಿವಾಸಮೂರ್ತಿ, ಜೋನಲ್ ಗೌರ್ನರ್ ಪ್ರಮೀಳಾ ಶಿವಕುಮಾರ್, ಕೆಎಸ್‌ಎಫ್‌ಸಿ ಶ್ರೀನಿವಾಸ ಮೂರ್ತಿ, ಇನ್ನರ್‌ವ್ಹೀಲ್ ತುಮಕೂರು ಸೆಂಟ್ರಲ್ ಅಧ್ಯಕ್ಷೆ ಲೀಲಾವತಿ ಅಶೋಕ್, ರೋಟರಿ ತುಮಕೂರು ಅಧ್ಯಕ್ಷೆ ಭಾಗ್ಯಲಕ್ಷ್ಮಿ ನಾಗರಾಜ್, ನಾಗರಾಜ್, ಮುಖಂಡರಾದ ಮಲ್ಲಸಂದ್ರ ಸಿದ್ಧರಾಮಣ್ಣ, ಬಸವರಾಜ ಹಿರೇಮಠ್, ಕೃಷ್ಣಮೂರ್ತಿ ಎಂ.ಎನ್. ಚಂದ್ರಶೇಖರ್,ರಮೇಶ್ ಮೊದಲಾದವರು ಭಾಗಹಿವಹಿಸಿದ್ದರು.

ಸೂರ್ಯಪ್ರಗತಿನ್ಯೂಸ್.ಕಾಂ

ಸಾಲ ಸೌಲಭ್ಯ : ಕಾಡುಗೊಲ್ಲ ಸಮುದಾಯದವರಿಂದ ಅರ್ಜಿ ಆಹ್ವಾನ

ತುಮಕೂರುಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕಾಗಿ ಕಾಡುಗೊಲ್ಲ ಜಾತಿಗೆ ಸೇರಿದವರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಫಲಾಪೇಕ್ಷಿಗಳು ಸಾಲ ಸೌಲಭ್ಯಕ್ಕಾಗಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ, ಅರಿವು–ಶೈಕ್ಷಣಿಕ ನೇರ ಸಾಲ(ಹೊಸತು ಹಾಗೂ ನವೀಕರಣ), ಗಂಗಾ ಕಲ್ಯಾಣ, ಸ್ವಾವಲಂಬಿ ಸಾರಥಿ ಹಾಗೂ ಹೊಲಿಗೆ ಯಂತ್ರ(ZIG-ZAG) ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು https://sevasindhu.karnataka.gov.in ಪೋರ್ಟಲ್ ಮೂಲಕ ಗ್ರಾಮ ಒನ್/ ಕರ್ನಾಟಕ ಒನ್/ ತುಮಕೂರು ಒನ್/ ಬೆಂಗಳೂರು ಒನ್ ಸೇವಾ ಕೇಂದ್ರದಲ್ಲಿ ಸೆಪ್ಟೆಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಕಾರ್ಡ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ ಹೊಂದಾಣಿಕೆಯಾಗಬೇಕು. 2024–25 ಮತ್ತು 2025–26ನೇ ಸಾಲುಗಳಲ್ಲಿ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ 0816–2005008ನ್ನು ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರ್ಯಪ್ರಗತಿನ್ಯೂಸ್.ಕಾಂ

ವೀರಶೈವ ಲಿಂಗಾಯತರಿಂದ ಅರ್ಜಿ ಆಹ್ವಾನ

ತುಮಕೂರು: ಕರ್ನಾಟಕ ವೀಶೈವ ಲಿಂಗಾಯತ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕಾಗಿ ವೀರಶೈವ ಲಿಂಗಾಯತ ಜಾತಿ ಮತ್ತು ಉಪಜಾತಿಗೆ ಸೇರಿದ ಸಮುದಾಯದವರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಫಲಾಪೇಕ್ಷಿಗಳು ಬಸವ ಬೆಳಗು(ಹೊಸತು/ನವೀಕರಣ), ವಿದೇಶ ವಿದ್ಯಾ ವಿಕಾಸ(ಹೊಸತು), ಜೀವ ಜಲ, ಕಾಯಕ ಕಿರಣ, ಸ್ವಾವಲಂಬಿ ಸಾರಥಿ, ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆಗಳಡಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿದಾರರು 2024–25 ಮತ್ತು 2025–26ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಮತ್ತೊಮ್ಮೆ ಮರು ಅರ್ಜಿ ಸಲ್ಲಿಸುವ

ಬಡಜನರ ಸೇವೆ ಮಾಡಲು ಭಗವಂತ ಶಕ್ತಿ ನೀಡಲಿ

ವಿ.ಪ.ಸದಸ್ಯ ರಾಜೇಂದ್ರ ರಾಜಣ್ಣ



ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ನಾಡಿನಲ್ಲಿ ಉತ್ತಮ ಮಳೆಯಾಗಲಿ ನಮ್ಮ ಕ್ಷೇತ್ರದ ಜನತೆಗೆ ಒಳಿತಾಗಲಿ ದೈವ ಕೃಪೆಯು ಪ್ರತಿಯೊಬ್ಬರಿಗೂ ಸಿಗುವ ಜೊತೆಗೆ ಎಲ್ಲರೂ ಸಮಾಜಮುಖಿ ಕಾರ್ಯಗಳನ್ನು ಮಾಡಲು ದೇವರು ಇನ್ನಷ್ಟು ಶಕ್ತಿ ನೀಡಲಿ ಎಂದು ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ತಿಳಿಸಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ನೂತನವಾಗಿ ಪ್ರತಿಷ್ಠಾಪಿಸಿರುವ ಶ್ರೀ ಗಣಪತಿ ಹಾಗೂ ಶ್ರೀ ಶನೈಶ್ವರ ಸ್ವಾಮಿಯ ಪ್ರತಿಷ್ಠಾನ ಮತ್ತು ವಿವಿಧ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ದೈವ ಕಾರ್ಯಗಳು ಮಾಡುವುದರಿಂದ ಮನುಷ್ಯನ ಮನಸ್ಸಿಗೆ ನೆಮ್ಮದಿ ದೊರಕುತ್ತದೆ ಹಾಗೆಯೇ ಬಡಜನರ ಸೇವೆ ಮಾಡಲು ಭಗವಂತನಿಂದ ಇನ್ನಷ್ಟು ಶಕ್ತಿ ದೊರಕುತ್ತದೆ ಪ್ರತಿಯೊಬ್ಬರೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಜೊತೆಗೆ ಸಮಾಜಸೇವೆ ಮಾಡುವ ಮೂಲಕ ಎಲ್ಲರ ಏಳ್ಗೆಗೆ ಶ್ರಮಿಸಿದಾಗ ಮಾತ್ರ ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ ಎಂದರು

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಕ್ಷೇತ್ರಸಿದ್ದರಬೆಟ್ಟದ ಬಾಳೇ ಹೊನ್ನೂರು ಶಾಖಾ ಮಠದ ಶ್ರೀ ಶ್ರೀ ಶ್ರೀ ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿದ್ದರು. ಈ ಸಂದರ್ಭದಲ್ಲಿ ಪುರಸಭಾ ಮಾಜಿ ಅಧ್ಯಕ್ಷ ಲಾಲಾಪೇಟೆ ಮಂಜುನಾಥ್ , ಧಾರ್ಮಿಕ ಮುಖಂಡ ಎಂ.ಜಿ. ಶ್ರೀನಿವಾಸಮೂರ್ತಿ, ರಘು, ಜಿ.ಎನ್.ಶ್ರೀನಾಥ್, ವಿವೇಕ್, ಶಿವಕುಮಾರ್, ಹಾಗೂ ಎಪಿಎಂಸಿ ಸಿಬ್ಬಂದಿ ವರ್ಗದವರು, ಮಂಡಿ ವರ್ತಕರು, ಹಮಾಲಿ ಸಂಘದ ಸದಸ್ಯರುಗಳು, ಭಕ್ತಾದಿಗಳು, ಸಾರ್ವಜನಿಕರು, ಭಾಗವಹಿಸಿದ್ದರು.

ಪರಿಸರ ಸ್ನೇಹಿ ಗಣಪತಿ ಪ್ರತಿಷ್ಠಾಪನೆಗೆ ಕರೆ.ಸಾರ್ವಜನಿಕರ ಸಹಕಾರ ಅಗತ್ಯ

ಸೂರ್ಯಪ್ರಗತಿನ್ಯೂಸ್.ಕಾಂ



" ಗಣೇಶ ಚತುರ್ಥಿ ಸಂದರ್ಭದಲ್ಲಿ ಪರಿಸರಕ್ಕೆ ಹಾನಿಯಾಗದಂತೆ ಪರಿಸರ ಸ್ನೇಹಿ ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಹಬ್ಬವನ್ನು ಭಕ್ತಿ ಹಾಗೂ ಸಂಭ್ರಮದೊಂದಿಗೆ ಆಚರಿಸುವಂತೆ ಉಪ ವಿಭಾಗಾಧಿಕಾರಿ ಸಪ್ತಶ್ರೀ ಕರೆ ನೀಡಿದರು.

ನಗರದ ನಗರಸಭೆ ಆವರಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಗಣಪತಿ ಪ್ರತಿಷ್ಠಾಪನೆ ಸಂದರ್ಭದಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಪರಿಸರಕ್ಕೆ ಹಾನಿಕಾರಕ ಬಣ್ಣಗಳಿಂದ ತಯಾರಿಸಿದ ಗಣೇಶ ಮೂರ್ತಿಗಳ ಬಳಕೆಯನ್ನು ಕಡಿಮೆ ಮಾಡಿ, ಮಣ್ಣಿನಿಂದ ತಯಾರಿಸಿದ ಗಣಪತಿ ಮೂರ್ತಿಗಳಿಗೆ ಆದ್ಯತೆ ನೀಡಬೇಕು. ಗಣೇಶ ಮೂರ್ತಿಗಳ ವಿಸರ್ಜನೆಯಿಂದ ಕೆರೆ, ನದಿ ಹಾಗೂ ಇತರೆ ಜಲಮೂಲಗಳು ಕಲುಷಿತವಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಹಾಗೂ ಗಣೇಶ ಹಬ್ಬವು ನಮ್ಮ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯ ಪ್ರತೀಕವಾಗಿದ್ದು, ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನೂ ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ಸಾರ್ವಜನಿಕರು ಹಾಗೂ ಗಣೇಶೋತ್ಸವ ಸಮಿತಿಗಳು ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ, ಶಾಂತಿ, ಸೌಹಾರ್ದತೆ ಮತ್ತು ಪರಿಸರ ಸ್ನೇಹಿ ರೀತಿಯಲ್ಲಿ ಹಬ್ಬ ಆಚರಿಸಬೇಕು ಎಂದು ಸಪ್ತಶ್ರೀ ಮನವಿ ಮಾಡಿದರು.

ಇದೆ ವೇಳೆ ಮಾತನಾಡಿದ ತಹಶೀಲ್ದಾರ್ ಮೋಹನ್ ಕುಮಾರ್ ಗಣಪತಿ ಪ್ರತಿಷ್ಠಾಪನೆ ಸಂದರ್ಭದಲ್ಲಿ ಏಕಗವಾಕ್ಷಿ ಸಮಿತಿಯಿಂದ ನೀಡಲಾಗಿರುವ ಅನುಮತಿ ಪತ್ರ ಕಡ್ಡಾಯವಾಗಿ ಪಡೆಯಬೇಕು ಪ್ರತಿಷ್ಠಾಪನೆ ಸ್ಥಳದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳುವುದು ಬೆಸ್ಕಾಂ ಕಛೇರಿಯಿಂದ ತಾತ್ಕಾಲಿಕ ಮೀಟರ್ ಕಡ್ಡಾಯವಾಗಿ ಪಡೆಯುವುದು ಆರೋಗ್ಯದ ದೃಷ್ಟಿಯಿಂದ ಪ್ರಸಾದ ವಿನಿಯೋಗ ಮತ್ತು ಅನ್ನ ಸಂತರ್ಪಣೆ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷರ ಮಾರ್ಗದರ್ಶನದಲ್ಲಿ ಪ್ರಸಾದ ವಿನಿಯೋಗ ನಡೆಸುವುದು ಹಾಗೂ ಗಣೇಶ ಉತ್ಸವದ ಮೆರವಣಿಗೆ ಸಮಯದಲ್ಲಿ ವಾಹನದ ಮೇಲೆ ಕಟ್ಟಿರುವ ಮಂಟಪಕ್ಕೆ ವಿದ್ಯುತ್ತಂತಿ ತಾಕದಂತೆ ಎಚ್ಚರ ವಹಿಸುವುದು ಧ್ವನಿವರ್ಧಕ ಮತ್ತು ಕಾರ್ಯಕ್ರಮವನ್ನು ರಾತ್ರಿ 10:00 ರ ನಂತರ ನಡೆಸುವಂತಿಲ್ಲ ಪರಿಸರಕ್ಕೆ ಶಬ್ದ ಮಾಲಿನ್ಯವಾಗದಂತೆ ಎಚ್ಚರ ವಹಿಸುವುದು ಫ್ಲೆಕ್ಸ್ ಹಾಗೂ ಕಟೌಟ್ಸ್ ಗಳನ್ನು ಕಟ್ಟಲು ಸ್ಥಳೀಯ ಆಡಳಿತದಿಂದ ಅನುಮತಿಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ ಗಣೇಶ ಮೂರ್ತಿ ಇರುವ ಸ್ಥಳ ಮತ್ತು ಸುತ್ತಮುತ್ತಲಿನ ಪ್ರದೇಶವನ್ನು ಸುಚಿತ್ವದಿಂದ ಕಾಪಾಡಿಕೊಳ್ಳುವುದು ನಗರ ಸಭೆಯ ಕಸದಗಾಡಿಗೆ ಕಸವನ್ನು ಹಾಕುವುದರ ಮೂಲಕ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದು ಆಯೋಜಕರ ಕರ್ತವ್ಯ ವಾಗಿರುತ್ತದೆ ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ನಗರಸಭಾ ಆಯುಕ್ತ ವಿಶ್ವೇಶ್ವರ ಬದರಗಡೆ, ಡಿವೈಎಸ್ಪಿ ಉಮೇಶ್, ವೃತ್ತ ನಿರೀಕ್ಷಕ ರವಿಕುಮಾರ್, ತಾಲೂಕಿನ ಅಧಿಕಾರಿಗಳು ಮತ್ತು ಗಣಪತಿ ತಯಾರಕರು ಹಾಜರಿದ್ದರು."

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.